# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 171 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 20–01–2024 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 171 Title- Code: KARKAN 28269 Chitradurga Date: 20-01-2024 Saturday Page: 4 Price: Rs. 2-00



ಒಳಪುಟದ ಸುದ್ದಿಗಳು

ಕ್ಯಾತಪ್ಪ ಗುಡಿ ನಿರ್ಮಾಣಕ್ಕೆ ಪೂಜೆಮರ ಕಡಿದ ಭಕ್ತ ಸಮೂಹ 2

ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಸೇರಿ ಎಲ್ಲಾ ರೀತಿ ಉಪಕರಣ ಬಳಕೆಗೆ ನಿಷೇಧ 3

ಅಪರೂಪದ ಶ್ರವಣಕುಮಾರನ ಸನ್ನಿದಿ ಶ್ರೀ ದಶರಥರಾಮೇಶ್ವರ ಕ್ಷೇತ್ರ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

ಸಾವಿತ್ರಿ ಬಾಯಿಪುಲೆ ಜಯಂತಿ

# ಮಹಿಳಾ ಶಿಕ್ಷಕಿಯರಿಗೆ ಪುಲೆ ಸದಾ ಆದರ್ಶಪ್ರಾಯರು: ರಘುಮೂರ್ತಿ





» ಚಳ್ಳಕೆರೆ

ಶಿಕ್ಷಣ ಕ್ಷೇತ್ರದಲ್ಲಿ ಇಂದು ಗುಣಾತ್ಮಕ ಶಿಕ್ಷಣ ನೀಡುವ ಎಲ್ಲಾ ವ್ಯವಸ್ಥೆ ಮುಂದುವರೆದಿದೆ. ವಿಶೇಷವಾಗಿ ಮಹಿಳಾ ಶಿಕ್ಷಕಿಯರು ತುಂಬಾ ಆಸಕ್ತಿಯಿಂದ ಶಿಕ್ಷಣ ಕ್ಷೇತ್ರದ ಬೆಳವಣಿಗೆಗೆ ತಮ್ಮದೇಯಾದ ಕೊಡುಗೆ ನೀಡುತ್ತಾ ಬಂದಿದ್ದಾರೆ. ಸಾವಿತ್ರಿಬಾಯಿಪುಲೆಯ ಆದರ್ಶಗಳನ್ನು ಮಹಿಳಾ ಶಿಕ್ಷಕಿಯರು ಮೈಗೂಡಿಸಿಕೊಳ್ಳಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶುಕ್ರವಾರ ನಗರದ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಮ್ಮಿಕೊಂಡಿದ್ದ ಮಾತೆಸಾವಿತ್ರಿಬಾಯಿಪುಲೆ ಜಯಂತಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಶಿಕ್ಷಣ ಕ್ಷೇತ್ರದಲ್ಲಿ ಮಹಿಳಾ ಶಿಕ್ಷಕಿಯರ ಶಖೆ ಆರಂಭವಾಗಿದ್ದು, ಸಾವಿತ್ರಿಬಾಯಿಪುಲೆಯುವರಿಂದ ಇತಿಹಾಸದಲ್ಲಿ ಶಿಕ್ಷಣ ಕ್ಷೇತ್ರದ ಮೊಟ್ಟಮೊದಲ ಮಹಿಳಾ ಶಿಕ್ಷಕಿ ಎಂಬ ಹೆಗ್ಗಳಿಕೆಗೆ ಕಾರಣರಾಗಿದ್ದಾರೆ. ಅವರ ಜಯಂತಿ ಆಚರಣೆ ಮಾಡುವ ಮೂಲಕ ಎಲ್ಲರೂ ಮತ್ತಷ್ಟು ಸ್ಪೂರ್ತಿ ಪಡೆಯಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಕೆ.ನಾಗೇಶ್, ಇಂದು ಶಿಕ್ಷಕರ ಹಲವಾರು ಸಮಸ್ಯೆಗಳನ್ನು ನಿವಾರಿಸುವಲ್ಲಿ ಸರ್ಕಾರ ಹೆಚ್ಚು ಆಸಕ್ತಿ ತೋರಿಲ್ಲ. ಶಿಕ್ಷಕರಲ್ಲಿ ಮಹಿಳಾ ಸಂಖ್ಯೆ ಹೆಚ್ಚಿದೆ, ವೈಯಕ್ತಿಕವಾಗಿ ಹಲವಾರು ಸಮಸ್ಯೆಗಳು ಶಿಕ್ಷಕಿಯರಿಗೆ ಇದೆ. ಈ ಬಗ್ಗೆ ಹಲವಾರು ಬಾರಿ ಗಮನಸೆಳೆದರೂ ನಿರೀಕ್ಷಿತ ಮಟ್ಟದಲ್ಲಿ ನಮಗೆ ಫಲದೊರಕಿಲ್ಲ, ಮುಂದಿನ ದಿನಗಳಲ್ಲಿ ಶಿಕ್ಷಕರ ಸಮೂಹಕ್ಕೆ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ಸರ್ಕಾರ ಮೇಲೆ ಒತ್ತಡ ಹೇರಲಾಗುವುದು ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್‌ನುಗ್ಗಿ ಮಾತನಾಡಿ, ನಾಲ್ಕು ಗೋಡೆಗಳ ಮಧ್ಯೆ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವ ಮೂಲಕ ಇಡೀ ಜಗತ್ತನ್ನೇ ಗೆಲ್ಲುವ ಶಕ್ತಿ ವಿದ್ಯಾರ್ಥಿಗಳಿಗೆ ಲಭಿಸಲಿ ಎಂಬ ಅಭಿಲಾಷೆಯಿಂದ ಶಿಕ್ಷಕರು ವಿದ್ಯಾರ್ಥಿಗಳಿಗೆ ಬೋಧನೆ ಮಾಡುತ್ತಾರೆ. ಹಲವಾರು ಕುಂದುಕೊರತೆಗಳ ನಡುವೆಯೂ ಶಿಕ್ಷಣ ಕ್ಷೇತ್ರದ ಬೆಳವಣಿಗೆ ಕುಂಠಿತವಾಗದಂತೆ ಎಚ್ಚರಿಕೆ ವಹಿಸಲಾಗಿದೆ ಎಂದರು. ಜಿಲ್ಲಾಧ್ಯಕ್ಷ ಆರ್.ಮಾರುತೇಶ್ ಮಾತನಾಡಿ, ಸಾವಿತ್ರಿಬಾಯಿಪುಲೆಯುವರಂತಹ ಆದರ್ಶಗಳು ಶಿಕ್ಷಕರಿಗೆ ಸದಾಸ್ಪೂರ್ತಿಯ ಸೆಲೆಯಾಗಿವೆ. ಶಿಕ್ಷಣ ಕ್ಷೇತ್ರದಲ್ಲಿ ಮಹಿಳಾ ಶಿಕ್ಷಕಿಯರ ಪಾತ್ರವೂ ಪ್ರಮುಖವಾಗಿದ್ದು, ಉತ್ತಮ ಶಿಕ್ಷಕಿಯರಿಗೆ ಸನ್ಮಾನ ಮಾಡುವ ಮೂಲಕ ಅವರ ಸೇವೆಯನ್ನು ಸ್ಮರಿಸಲಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಮಹಲಿಂಗಪ್ಪ, ಪ್ರತಿವರ್ಷ ಸಾವಿತ್ರಿಬಾಯಿಪುಲೆಯವರ ಕಾರ್ಯಕ್ರಮವನ್ನು ಆಚರಿಸುವ ಮೂಲಕ ಶಿಕ್ಷಕರಿಗೆ ಸ್ಪೂರ್ತಿ ನೀಡಲಾಗುತ್ತಿದೆ. ತಾಲ್ಲೂಕಿನಾದ್ಯಂತ ಬಹುತೇಕ ಎಲ್ಲಾ ಶಾಲೆಗಳಲ್ಲೂ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣವನ್ನು ನೀಡುವ ಮೂಲಕ ಶಿಕ್ಷಕರು ಶಿಕ್ಷಣ ಇಲಾಖೆಗೆ ಅಪಚುತಿಬರದಂತೆ ಜಾಗೃತರಾಗಿ ಕಾರ್ಯನಿರ್ವಹಿಸುತ್ತಿದ್ದಾರೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಅಕ್ಷರ ದಾಸೋಹ ಅಧಿಕಾರಿ ತಿಪ್ಪೇಸ್ವಾಮಿ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಮಧು, ಶಾಂತಕುಮಾರಿ, ಪ್ರಧಾನ ಕಾರ್ಯದರ್ಶಿ ತಿಪ್ಪೇಸ್ವಾಮಿ, ಖಜಾಂಚಿ ರಂಗನಾಥ, ಚನ್ನಕೇಶವ, ಆಶಾ, ವೀರಭದ್ರಪ್ಪ, ಗೀತಾಕುಮಾರಿ ಪಾಲ್ಗೊಂಡಿದ್ದರು.



ಇಂದು ಚಿತ್ರದುರ್ಗದಲ್ಲಿ ಮಾನ್ಯ ಕೇಂದ್ರ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರಾದ ಶ್ರೀ ಯುತ ಎ ನಾರಾಯಣ ಸ್ವಾಮಿಯವರಿಗೆ ಅಯೋಧ್ಯಾ ಶ್ರೀ ರಾಮ ಮಂದಿರದ ಮಂತ್ರಾಕ್ಷತೆ ವಿತರಣೆ ಮಾಡಲಾಯಿತು. ಈ ಸಂಧರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಮುರುಳಿ ಯವರು ಜಿಲ್ಲಾ ಮಂತ್ರಾಕ್ಷತೆ ತಂಡದ ಪ್ರಮುಖರು ಯುವ ಮುಖಂಡರಾದ ಜಿ.ಎಸ್. ಅನಿತ್ ಕುಮಾರ್ ಸಂಘದ ಪ್ರಮುಖರಾದ ದೇವರಾಜ್ ಕೋಟ್ಲಾ ,ಜಿಲ್ಲಾ ಪ್ರಚಾರಕ್ರಾದ ಶ್ರೀ ನಾಥ್,ವಿಶ್ವ ಹಿಂದೂ ಪರಿಷತ್ ನ ರುದ್ರೇಶ್ ,ದರ್ಶನ್ , ಕಾರ್ಯಕರ್ತರು ಉಪಸ್ಥಿತರಿದ್ದರು

## ಜ.20 ಮತ್ತು 21ರಂದು ಸ್ಪರ್ಧಾತ್ಮಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಇದೇ ಜನವರಿ 20 ಮತ್ತು 21ರಂದು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ನಡೆಸಲಾಗುವ ವಾಣಿಜ್ಯ ತೆರಿಗೆ ಪರೀಕ್ಷಕರ ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ನಡೆಯುವ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತ ಸಿ.ಆರ್.ಪಿ.ಸಿ ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಕಡಲೆ ಬೆಳೆಗೆ ಆಸ್ಕೋ ಕೈಟಾ ಅಂಗಮಾರಿ ರೋಗ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಗುಡ್ಡದರಂಗವ್ವನಹಳ್ಳಿ ಗ್ರಾಮಕ್ಕೆ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯ–ರೈತ ಸಂಜೀವಿನಿ ವಾಹನವು ಈಚೆಗೆ ಭೇಟಿ ನೀಡಿ ಕಡಲೆ ಬೆಳೆಯನ್ನು ಪರೀಕ್ಷಿಸಿದ ಸಂದರ್ಭದಲ್ಲಿ ಆಸ್ಕೋ ಕೈಟಾ ಅಂಗಮಾರಿ ರೋಗ ಕಂಡುಬಂದಿರುತ್ತದೆ. ಜಿಲ್ಲೆಯಲ್ಲಿ ಪ್ರಸ್ತುತ ಕಡಲೆ ಬೆಳೆ ಬೆಳವಣಿಗೆಯಿಂದ ಹೂವಾಡುವ ಹಂತದಲ್ಲಿರುತ್ತದೆ. ಕಡಲೆ ಬೆಳೆಗೆ ಆಸ್ಕೋ ಕೈಟಾ ಅಂಗಮಾರಿ ರೋಗವು ಗುಡ್ಡದ ರಂಗವ್ವನಹಳ್ಳಿ ಗ್ರಾಮ, ಸುತ್ತಮುತ್ತ ಪ್ರದೇಶದಲ್ಲಿ ಹಾಗೂ ಕಡಲೆ ಬೆಳೆದಂತಹ ಚಿತ್ರದುರ್ಗ ತಾಲ್ಲೂಕಿನಲ್ಲಿ ಕೂಡ ಈ ಸಂದರ್ಭದಲ್ಲಿ ಕಂಡುಬರುವ ಸಾಧ್ಯತೆ ಇರುತ್ತದೆ. ಆಸ್ಕೋ ಕೈಟಾ ಅಂಗಮಾರಿ ರೋಗದ ಹತೋಟಿಗೆ ಮ್ಯಾಂಕೋಜೆಬ್ 2 ಗ್ರಾಂ ಪ್ರತಿ ಲೀಟರ್‌ಗೆ ಅಥವಾ ಸಾಫ್ 2 ಗ್ರಾಂ ಪ್ರತಿ ಲೀಟರ್‌ಗೆ ಅಥವಾ ಕಾರ್ಬನ್‌ಡೈಜಿಯಂ 2 ಗ್ರಾಂ ಪ್ರತಿ ಲೀಟರ್‌ಗೆ ಬೆರೆಸಿ ಸಂಪಡಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ನಿರ್ದೇಶಕರು (ವಿಷಯ ತಜ್ಞರು) ರೈತರಿಗೆ ಸಲಹೆ ನೀಡಿದ್ದಾರೆ.

### ಮಾಡಳ್ಳಿ ಈರವ್ವ ತಿಪ್ಪಣ್ಣಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆಯ ಯಶೋಧರಮ್ಮ ಬೋರಪ್ಪ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕೆ ಮಾಢಳ್ಳಿ ಈರವ್ವ ತಿಪ್ಪಣ್ಣ ಅವರು ಮಂಡಿಸಿದ ಮಹಾಪ್ರಬಂಧಕ್ಕೆ ಕುವೆಂಪು ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ. ಮಾಢಳ್ಳಿ ಈರವ್ವ ತಿಪ್ಪಣ್ಣ ಅವರು ತುಮಕೂರು ವಿವಿ ಕುಲಸಚಿವ ಡಾ.ಕೆ.ಪ್ರಸನ್ನಕುಮಾರ್ ಮಾರ್ಗದರ್ಶನದಲ್ಲಿ ಮಾನವ ಹಕ್ಕುಗಳು ಮತ್ತು ಮಹಿಳಾ ಸಬಲೀ ಕರಣ: ಧಾರವಾಡ ಜಿಲ್ಲೆ ಒಂದು ಅಧ್ಯಯನ ಎಂಬ ವಿಷಯದ ಕುರಿತು ಮಹಾಪ್ರಬಂಧ ಮಂಡಿಸಿದ್ದರು.

### ಉಚಿತ ಮೊಣಕಾಲು ಶಸ್ತ್ರ ಚಿಕಿತ್ಸಾ ತಪಾಸಣಾ ಶಿಬಿರ

» ಚಳ್ಳಕೆರೆ

ನಗರದ ರೋಟರಿ ಕ್ಲಬ್ ಮತ್ತು ಬೆಂಗಳೂರಿನ ನಾರಾಯಣಹೆಲ್ತ್‌ಸಿಟಿ ಸಂಯುಕ್ತಾಶ್ರಯದಲ್ಲಿ ಶನಿವಾರ ಜ.20ರ ಬೆಳಗ್ಗೆ 10ರಿಂದ ಮಧ್ಯಾಹ್ನ 2ರ ತನಕ ಉಚಿತ ಮೊಣಕಾಲು ಬದಲಿ ಶಸ್ತಚಿಕಿತ್ಸಾ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ರೋಟರಿ ಕ್ಲಬ್‌ನ ಹಿರಿಯ ಸದಸ್ಯ ಎಸ್. ಜಯಪ್ರಕಾಶ್ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ ಪ್ರಸ್ತುತ ಇಂದಿನ ದಿನಮಾನದಲ್ಲಿ ಹೆಚ್ಚು ಜನಮೊಣಕಾಲು ನೋವಿನಿಂದ ಬಾಧಿತರಾಗಿದ್ದಾರೆ. ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದರೂ ಮೊಣಕಾಲು ನೋವು ಮಾತ್ರ ವಾಸಿಯಾಗಿಲ್ಲ. ಈ ಹಿನ್ನೆಲೆಯಲ್ಲಿ ಉಚಿತ ಮೊಣಕಾಲು ಬದಲಿ ಶಸ್ತ್ರ ಚಿಕಿತ್ಸೆ ತಪಾಸಣಾ ಶಿಬಿರ ಹಮ್ಮಿಕೊಂಡಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆ.ನಾಗೇಶ್ ವಹಿಸುವರು.

ಪ್ರಮುಖ ಸುದ್ದಿ

# ಮಹಾತ್ಮರ ಜೀವನ ಸಂದೇಶ ಮಕ್ಕಳಿಗೆ ತಿಳಿಸಿ: ಎಡಿಸಿ

» ಚಿತ್ರದುರ್ಗ

ಮಹಾತ್ಮರ ಜೀವನ ಸಂದೇಶಗಳನ್ನು ಮಕ್ಕಳಿಗೆ ತಿಳಿಯಪಡಿಸಬೇಕು. ಈ ಉದ್ದೇಶದಿಂದಲೇ ಸರ್ಕಾರ ಮಹನೀಯರ ಜಯಂತಿಗಳನ್ನು ಆಚರಿಸುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮದಲ್ಲಿ, ವೇಮನರ ಭಾವಚಿತ್ರಕ್ಕೆ ಪುಷ್ಪ ನಮನ ಸಮರ್ಪಿಸಿ ಅವರು ಮಾತನಾಡಿದರು.

ಹುಟ್ಟು ಆಕಸ್ಮಿಕ, ಇಂತಹದೇ ಜಾತಿಯಲ್ಲಿ ಹುಟ್ಟಬೇಕು ಎಂದು ಅರ್ಜಿ ಹಾಕಿ ಯಾರೂ ಹುಟ್ಟುವುದಿಲ್ಲ. ಎಲ್ಲರೂ ಹುಟ್ಟುತಾ ಮಾನವರಾಗಿ ಇರುತ್ತಾರೆ. ನಂತರ ಸ್ವಭಾವಗಳಿಂದ ಅಲ್ಪ ಮಾನವರಾಗುತ್ತಾರೆ. ಮಹನೀಯರಾದ ಕೆಲವೇ ಜನರು ವಿಶ್ವಮಾನವರಾಗುತ್ತಾರೆ ಎಂದರು.



ಆಂಧ್ರಪ್ರದೇಶದಮಹಾಯೋಗಿವೇಮನ, ಕರ್ನಾಟಕದ ಸರ್ವಜ್ಞ, ಮಹಾರಾಷ್ಟ್ರದ ನಾಮದೇವ,ತಮಿಳುನಾಡಿನತಿರುವಳ್ಳುವರ್ ಸಮಕಾಲೀನರು. ತಮ್ಮ ರಚನೆಗಳ ಮೂಲಕ ಸಮಾಜದ ಕಂದಾಚಾರ, ಮೂಢನಂಬಿಕೆ, ಸೋಗಲಾಡಿತನವನ್ನು ಪ್ರಶ್ನಿಸಿದರು. ಶ್ರೇಷ್ಠ ಮಾನವೀಯ ಮೌಲ್ಯಗಳನ್ನು ಸಾರುವುದರ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ನಮ್ಮ ನಡೆನುಡಿಗಳಲ್ಲಿ ಸಾಕಷ್ಟು ವ್ಯತ್ಯಾಸ ಕಂಡುಬರುತ್ತದೆ. ಆದರೆ ಈ ಮಹನೀಯರು ನಡೆ ನುಡಿಗಳಲ್ಲಿ ಒಂದೇ ಆಗಿ ಬದುಕಿದರು. ನಾವು ಜಗತ್ತಿಗೆ ಮಾದರಿಯಾಗುವುದಕ್ಕಿಂತ ನಮ್ಮ ಮಕ್ಕಳಿಗೆ ಮಾದರಿಯಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಸರ್ಕಾರಿ ಕಲಾ ಕಾಲೇಜು ಕನ್ನಡ ಪ್ರಾಧ್ಯಾಪಕ ಡಾ.ಜಿ.ಎನ್.ಯಶೋಧರ ಮಾತನಾಡಿ, ಮಹಾತ್ಮರನ್ನು ಜಾತಿ, ಮತ, ವರ್ಗಗಳಿಗೆ ಸೀಮಿತ ಮಾಡಬಾರದು. ಭೂಪಾಲ ವಂಶದಲ್ಲಿ, ಅಂದರೆ ರಾಜ ಮನೆತನದಲ್ಲಿ ಹುಟ್ಟಿದ ವೇಮನ ಅವರು ಶರೀರದ ಬಗ್ಗೆ ವೈರಾಗ್ಯ ತಾಳಿ, ಆತ್ಮಸುಖ ಬಯಸಿ ಜ್ಞಾನೋದಯ ಪಡೆದರು. ವೇಮನರ ಈ ಬದಲಾವಣೆಗೆ ಅತ್ತಿಗೆ ಹೇಮರೆಡ್ಡಿ ಮಲ್ಲಮ್ಮ ಕಾರಣವಾದರು. ಸರಳವಾದ ತೆಲುಗು ಭಾಷೆಯಲ್ಲಿ ವೇಮನರು ತಮ್ಮ ಅನುಭವ ಹಾಗೂ ಜ್ಞಾನವನ್ನು ವಚನಗಳ ಮೂಲಕ ಸಾದರ ಪಡಿಸಿದ್ದಾರೆ. 'ವಿಶ್ವದಾಭಿ ರಾಮ ವಿನೂರ ವೇಮ' ಎಂಬುದು ಇವರ ಅಂಕಿತನಾಮವಾಗಿದೆ ಎಂದರು.

ರೆಡ್ಡಿ ಸಮಾಜದ ಹಿರಿಯ ಮುಖಂಡ ಗೋವಿಂದ ರೆಡ್ಡಿ ಮಾತನಾಡಿ, ಸಿ.ಪಿ.ಬ್ರಾನ್ ಎಂಬುವವರು ವೇಮನರ ಕವಿತೆಗಳನ್ನು ಸಂಗ್ರಹಿಸಿ ಪ್ರಕಟಿಸಿದರು. ಆಂಧ್ರ ಪ್ರದೇಶ ಹಾಗೂ ಕರ್ನಾಟಕದಲ್ಲಿ ವೇಮನರ ಕವಿತೆಗಳು ಜನ ಜನಿತವಾಗಿವೆ. ಜೀವನದ ನಶ್ವರತೆ ತಿಳಿದ ವೇಮನರು ನಗ್ನ ವೈರಾಗಿಯಾಗಿ ನಾಡನ್ನು ಸಂಚರಿಸಿ ಲೋಕಜ್ಞಾನ ಹರಡಿದ್ದಾರೆ ಎಂದರು.

ಮೊಳಕಾಲ್ಮೂರು ತಾಲ್ಲೂಕು ತಮಕೊರ್ಲಹಳ್ಳಿ ಕೆ.ಓ. ಶಿವಣ್ಣ ಮತ್ತು ತಂಡದವರು ಜಯಂತಿ ಕಾರ್ಯಕ್ರಮದಲ್ಲಿ ಗೀತಗಾಯನ ಪ್ರಸ್ತುತ ಪಡಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ತಹಶೀಲ್ದಾರ್ ಡಾ.ನಾಗವೇಣಿ, ರೆಡ್ಡಿ ಸಮಾಜದ ಜಿ.ಹನುಮಂತರೆಡ್ಡಿ, ತಿಪ್ಪೇಸ್ವಾಮಿ ರೆಡ್ಡಿ, ಜಿ.ಅಶ್ವತ್ಥನಾರಾಯಣ ರೆಡ್ಡಿ, ವೆಂಕಟೇಶ್ ರೆಡ್ಡಿ, ನಾಡಿಗರ ರೆಡ್ಡಿ, ಕಟ್ಟಾ ತಿಪ್ಪಾರೆಡ್ಡಿ, ವಿಜಯಕುಮಾರ ರೆಡ್ಡಿ, ಧನಂಜಯ ರೆಡ್ಡಿ, ಟಿ.ಕೆ.ತಿಮ್ಮಾರೆಡ್ಡಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಾಳೆ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಚಿತ್ರದುರ್ಗ ನಗರ ಉಪವಿಭಾಗ ಘಟಕ–1 ಮತ್ತು ಘಟಕ–3ರ ವ್ಯಾಪ್ತಿಯಲ್ಲಿ ಬರುವ ಕೋಟೆ, ಜಿಲ್ಲಾ ಪಂಚಾಯತ್, ಕಾಪರ್ ಮೈನ್ಸ್, 11 ಕೆ.ವಿ ಮಾರ್ಗಗಳ ತುರ್ತು ನಿರ್ವಹಣಾ ಕೆಲಸಗಳನ್ನು ನಿರ್ವಹಿಸಲು ಇದೇ ಜ.21ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ನಿಲುಗಡೆಗೊಳಪಡುವ ಪ್ರದೇಶಗಳು: ಕೋಟೆ–ಇಂಡಸ್ಟ್ರೀಯಲ್ ಏರಿಯಾ, ಗಾಂಧಿ ನಗರ, ಐಯುಡಿಪಿ ಲೇಔಟ್, ವಿಜ್ಞಾನ ಕಾಲೇಜ್, ಬುದ್ಧ ನಗರ, ಜೋಗಿಮಟ್ಟಿ ರಸ್ತೆ, ಎಸ್.ವಿ.ನಗರ, ಟೀಚರ್ಸ್ ಕಾಲೋನಿ, ಸೂರ್ಯಪುತ್ರ ಸರ್ಕಲ್, ಕಣುಮಪ್ಪ ಲೇಔಟ್, ಜೆ.ಪಿ.ನಗರ ಹಾಗೂ ಸುತ್ತಮುತ್ತಲಿನ ಪ್ರದೇಶ. ಜಿಲ್ಲಾ ಪಂಚಾಯತ್–ಐಯುಡಿಪಿ ಲೇಔಟ್, ಸರಸ್ವತಿ ಪುರಂ, ಕೆ.ಕೆ.ಸರ್ಕಲ್, ಕಾಮನಬಾವಿ ಬಡಾವಣೆ, ಕೋಟೆ ರಸ್ತೆ, ಸರ್ಕಾರಿ ಡಿಪ್ಲೊಮಾ ಕಾಲೇಜ್, ಮಹಾರಾಣಿ ಕಾಲೇಜ್, ದೊಡ್ಡಪೇಟೆ, ದೊಡ್ಡಗರಡಿ ಹಾಗೂ ಸುತ್ತಮುತ್ತಲಿನ ಪ್ರದೇಶ. ಕಾಪರ್ ಮೈನ್ಸ್–ಕುಂಚಿಗನಾಳ್, ಇಂಗಳದಾಳ್, ಕುರುಮರಡಿಕೆರೆ, ಕೆನ್ನೆಡೆಲ, ಕ್ಯಾದಿಗೆರೆ, ಡಿ.ಎಸ್.ಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಚಿತ್ರದುರ್ಗ ನಗರ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಜ.28ರಂದು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಲಿಖಿತ ಪರೀಕ್ಷೆ

» ಚಿತ್ರದುರ್ಗ

2022–23ನೇ ಸಾಲಿನ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್)– 3064 ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ಇದೇ ಜನವರಿ 28ರಂದು ಭಾನುವಾರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ರವರೆಗೆ ಚಿತ್ರದುರ್ಗ ನಗರದಲ್ಲಿ ಒಟ್ಟು 25 ಶಾಲಾ, ಕಾಲೇಜುಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದೆ.

ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಯಾವುದೇ ರೀತಿಯ ಪುಸ್ತಕ, ಕೈಬರಹ ಚೀಟಿ, ಪೇಜರ್, ಕ್ಯಾಲ್ಕುಲೇಟರ್, ಇಯರ್‌ಫೋನ್, ಮೊಬೈಲ್‌ಫೋನ್ ಪರೀಕ್ಷೆಗೆ ತರಲು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಬೆಲೆ ಬಾಳುವ ವಸ್ತು, ಸಾಮಾಗ್ರಿ ತರದಂತೆ ತಿಳಿಸಲಾಗಿದ್ದು, ತಮ್ಮ ವಸ್ತುಗಳಿಗೆ ತಾವೇ ಜವಾಬ್ದಾರರು. ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್ ಸಹ ಕಳಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರ ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ ಹಾಗೂ ಕರೆಪತ್ರದಲ್ಲಿ ನಮೂದಿಸಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

### ಭರತನಾಟ್ಯ ಸೊಬಗು ಕಾರ್ಯಕ್ರಮ 21ರಂದು.

» ಚಳ್ಳಕೆರೆ

ಕಳೆದ ಸುಮಾರು 38 ವರ್ಷಗಳಿಂದ ಸಂಗೀತ ಮತ್ತು ನೃತ್ಯದಲ್ಲಿ ತನ್ನದೇಯಾದ ವಿಶೇಷತೆ ಹೊಂದಿರುವ ನೃತ್ಯನಿಕೇವನ ಶಾಸ್ತ್ರಿಯ ನೃತ್ಯ ಸಂಗೀತ, ಶಿಕ್ಷಣ ಕೇಂದ್ರ ಕನ್ನಡ ರಾಜ್ಯೋತ್ಸವದ ಸುವರ್ಣಮಹೋತ್ಸವದ ಅಂಗವಾಗಿ ಬಡಾವಣೆಗಳಲ್ಲಿ ಭರತನಾಟ್ಯ ಸೊಬಗು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಯು.ಎಸ್.ವಿಷ್ಣುಮೂರ್ತಿರಾವ್ ತಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ, ಜ.21ರ ಭಾನುವಾರ ಸಂಜೆ 5.15ಕ್ಕೆ ಟಿ.ಆರ್.ನಗರದ ಶ್ರೀಕೃಷ್ಣ ವಿದ್ಯಾರ್ಥಿನಿಯಲದ ಸಭಾಂಗಣದಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮ ಉದ್ಘಾಟಿಸುವರು. ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ ಅಧ್ಯಕ್ಷತೆ ವಹಿಸುವರು, ನಗರಸಭಾ ಸದಸ್ಯ ಎಸ್.ಜಯಣ್ಣ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿ, ಸೂರ್ಯಪ್ರಭವೀರಭದ್ರಪ್ಪ, ಪುಷ್ಪಚಂದ್ರನಾಯ್ಕ, ಎಂ.ಎನ್.ಮೃತ್ಯುಂಜಯ, ಕಾರ್ಯದರ್ಶಿ ಸುಧಾಮೂರ್ತಿ ಭಾಗವಹಿಸುವರು.

### ಸೇವೆಯಲ್ಲಿ ವಿಕಲಾಂಗತೆ: ಮಾಜಿ ಸೈನಿಕರ ವಿವರ ನೀಡಲು ಮನವಿ

» ಚಿತ್ರದುರ್ಗ

ಎನಬಲ್ ಇಂಡಿಯಾ ಆರ್ಗನೈಸೇಷನ್ ಅವರು ಯುದ್ಧ, ಯುದ್ಧದಂತಹ ಕಾರ್ಯಾಚರಣೆ ಹಾಗೂ ಸಾಮಾನ್ಯ ಸೇವೆಗೆ ಸಂಬಂಧಿಸಿದಂತೆ ತೀವ್ರವಾಗಿ ಗಾಯಗೊಂಡು 50 ಪ್ರತಿಶತಕ್ಕಿಂತ ಹೆಚ್ಚು ಅಧಿಕ ವಿಕಲಾಂಗತೆ ಹೊಂದಿರುವ 45 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಾಜಿ ಸೈನಿಕರಿಗೆ ಕೌಶಲ್ಯ ಅಭಿವೃದ್ಧಿ, ಸಮಾಲೋಚನೆ ಹಾಗೂ ಜೀವನೋಪಾಯಗಳಂತಹ ತರಬೇತಿ ನೀಡಲು ತರಬೇತಿ ನೀಡಲು ಆಸಕ್ತರ ವಿವರಗಳನ್ನು ಕೋರಿದ್ದಾರೆ. ಆಸಕ್ತರು ಜ.19 ರೊಳಗೆ ಸಂಬಂಧಿತ ವೈದ್ಯಕೀಯ ದಾಖಲೆ ಹಾಗೂ ಸೇವಾ ಪುಸ್ತಕ ವಿವರಗಳೊಂದಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಅವರ ದೂರವಾಣಿ ಸಂಖ್ಯೆ 08182–220925 ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

---

ಕ್ಷೇತ್ರದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಪ್ರತ್ಯೇಕ ವಾರ್‌ರೂಂ ಸ್ಥಾಪಿಸಿ

# ಕುಡಿವ ನೀರು, ಮೇವಿಗೆ ಹಣ ಬಿಡುಗಡೆ

» ಚಳ್ಳಕೆರೆ



ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಎರಡನೇ ತ್ರೈಮಾಸಿಕ ಸಭೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ಗುರುವಾರ ನಡೆಯಿತು. ಮೂರನೇ ಬಾರಿಗೆ ಶಾಸಕರಾದ ನಂತರ ಎರಡನೇ ತ್ರೈಮಾಸಿಕ ಸಭೆ ಇದಾಗಿದ್ದು, ಕ್ಷೇತ್ರದ ಹಲವಾರು ಸಮಸ್ಯೆಗಳ ಬಗ್ಗೆ ಅಧಿಕಾರಿ ವರ್ಗ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು. ಬರುವ ಫೆಬ್ರವರಿ ತಿಂಗಳಲ್ಲಿ ಮಿನಿ ವಿಧಾನಸೌಧ, ಜಗಜೀವನರಾಂ ಭವನ, ಬಿಎಂಜಿಎಚ್‌ಎಸ್ ಮತ್ತು ಎಚ್‌ಟಿಟಿ ಪ್ರೌಢಶಾಲೆಗಳ ನವೀಕರಣ ಕಟ್ಟಡಗಳ ಉದ್ಘಾಟನೆಗೆ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಆಹ್ವಾನಿಸಲಾಗುವುದು, ಕ್ಷೇತ್ರದ ನೀರಿನ ಸಮಸ್ಯೆಯ ಬಗ್ಗೆ ತಾಲ್ಲೂಕು ಪಂಚಾಯಿತಿ ಕೇಂದ್ರದಲ್ಲಿ ವಾರ್‌ರೂಂ ಆರಂಭಿಸುವಂತೆ ಸೂಚಿಸಿದರು.

ಸಭೆ ಆರಂಭಕ್ಕೂ ಮುನ್ನ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶಶಿಧರ ಶಾಸಕರಾದ ಟಿ.ರಘುಮೂರ್ತಿ, ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ, ಜಂಟಿ ಕೃಷಿ ನಿರ್ದೇಶಕ ಮಂಜುನಾಥ, ತಹಶೀಲ್ದಾರ್ ರೇಹಾನ್ ಪಾಷ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸಿದರು. ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಅಧಿಕಾರಿಗಳು ಪೂರ್ಣಪ್ರಮಾಣದಲ್ಲಿ ಮಾಹಿತಿ ನೀಡುವಂತೆ ಸೂಚನೆ ನೀಡಿದರು.

ಪ್ರಾರಂಭದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ರೈತರ ಬೆಳೆ ವಿಮೆ ಪರಿಹಾರದ ಬಗ್ಗೆ ಚರ್ಚಿಸಿದ ಶಾಸಕರು, ಬೇಸಿಗೆ ಕಾಲ ಈಗಾಗಲೇ ಎಲ್ಲೆಡೆ ವ್ಯಾಪಿಸಿದೆ. ಕ್ಷೇತ್ರದ ಯಾವುದೇ ಗ್ರಾಮದಲ್ಲಿ ಜನರು ಕುಡಿಯುವ ನೀರು ಸಿಗದೆ ಹತಾಷರಾಗಬಾರದು. ಗ್ರಾಮೀಣ ಕುಡಿಯುವನೀರುಮತ್ತುನೈರ್ಮಲ್ಯಇಲಾಖೆ ಅಧಿಕಾರಿ ದಯಾನಂದ, ತಿಪ್ಪೇಸ್ವಾಮಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಶಾಸಕರು ಹೆಚ್ಚುವರಿಯಾಗಿ ಬೋರ್‌ಕೊರೆಸಿ ಅಲ್ಲೂ ಸಹ ನೀರು ಸಿಗದೇ ಇದ್ದಲ್ಲಿ ಕಡೆ ಪಕ್ಷ ಟ್ಯಾಂಕರ್‌ಗಳಲ್ಲಾದರೂ ನೀರು ಪೂರೈಸಿ. ಸರ್ಕಾರ ಇತ್ತೀಚೆಗೆ ಬೇಸಿಗೆ ಸಂದರ್ಭದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಿದ್ದು ಇದಕ್ಕಾಗಿ 9 ಕೋಟಿ ಹಣವನ್ನು ಬಿಡುಗಡೆಗೊಳಿಸಿದೆ ಎಂದರು.

ಕುಡಿಯುವ ನೀರು ಇಲಾಖೆ ಅಧಿಕಾರಿ ದಯಾನಂದ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ಜೆಜೆಎಂ ಕಾಮಗಾರಿ ಪ್ರಗತಿಯಲ್ಲಿದೆ. ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿ ಮಾಡಲಾಗಿದೆ. ಒಟ್ಟು 26 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು ಹೆಚ್ಚುವರಿ ಬೋರ್‌ಗಳನ್ನು ಕೊರೆಸಲಾಗುವುದು ಎಂದರು.

ಪಂಚಾಯಿತ್‌ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿ ಎನ್.ಕಾವ್ಯ ಮಾಹಿತಿ ನೀಡಿ, ಸರ್ಕಾರ 108 ಕೋಟಿ ಹಣವನ್ನು ವಿವಿಧ ರಸ್ತೆ ಅಭಿವೃದ್ದಿ ಕಾಮಗಾರಿಗೆ ಬಿಡುಗಡೆಗೊಳಿಸಿದೆ. ಮೊಳಕಾಲ್ಮೂರು ಕ್ಷೇತ್ರದಲ್ಲಿ 71, ಚಳ್ಳಕೆರೆ ವ್ಯಾಪ್ತಿಯಲ್ಲಿ 52 ಒಟ್ಟು 123 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾಹಿತಿ ನೀಡಿ, ಚಳ್ಳಕೆರೆ ವಿಧಾನಸಭಾ ವ್ಯಾಪ್ತಿಯಲ್ಲಿ 138 ಶಿಕ್ಷಕರ ನೇಮಕವಾಗಿದೆ, 27 ಅತಿಥಿ ಶಿಕ್ಷಕರು ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ.164 ಶಾಲಾ ಕೊಠಡಿಗಳು ದುರಸ್ಥಿಯಾಗಬೇಕಿದ್ದು, ಈ ಬಗ್ಗೆ ಸರ್ಕಾರಕ್ಕೆ ಮಾಹಿತಿ ನೀಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಶಾಸಕರು ಗ್ರಾಮೀಣ ಭಾಗದ ಶಾಲೆ ಹಾಗೂ ಹಾಸ್ಟಲ್‌ಗಳಲ್ಲಿ ಶೌಚಾಲಯ ವ್ಯವಸ್ಥೆಗೆ ಪ್ರತ್ಯೇಕ ಸಿಬ್ಬಂದಿ ನೇಮಕ ಮಾಡಿ ಎಂದರು. ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ ಮಾಹಿತಿ ನೀಡಿ, ಒಟ್ಟು 14 ಹಾಸ್ಟಲ್ ಕಾರ್ಯನಿರ್ವಹಿಸುತ್ತಿದೆ, 1200 ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಲಾಗಿದೆ ಎಂದರು. ಬಿಸಿಎಂ ಅಧಿಕಾರಿ ದಿವಾಕರ್ ಮಾಹಿತಿ ನೀಡಿ, ಎಲ್ಲಾ ಬಿಸಿಎಂ ಹಾಸ್ಟಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಸೌಲಭ್ಯ ಒದಗಿಸಿದೆ ಎಂದರು. ಪರಿಶಿಷ್ಟ ವರ್ಗದ ಕಲ್ಯಾಣಾಧಿಕಾರಿ ಶಿವರಾಜ್ ಮಾಹಿತಿ ನೀಡಿ, ಈಗಾಗಲೇ ಪರೀಕ್ಷೆಗಳ ದಿನಾಂಕ ಘೊಷಣೆಯಾಗಿದೆ. ಎಲ್ಲಾ ವಿದ್ಯಾರ್ಥಿಗಳಿಗೆ ಹಾಸ್ಟಲ್ ಆವರಣದಲ್ಲೇ ವಿದ್ಯಾಭ್ಯಾಸ ಮಾಡಲು ಅವಕಾಶ ಮಾಡಿ, ಮೇಲ್ವಿಚಾರಣೆ ನಡೆಸಲಾಗುತ್ತಿದೆ ಎಂದರು.

ಸಿಡಿಪಿಒ ಹರಿಪ್ರಸಾದ್ ಮಾಹಿತಿ ನೀಡಿ, 44 ಹೊಸ ಅಂಗನವಾಡಿ ಕಟ್ಟಡಗಳ ಅವಶ್ಯಕತೆ ಇದ್ದು, ಶಿಫಾರಸ್ಸು ಮಾಡಲಾಗಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ಶೇ.96 ಅಭಿವೃದ್ದಿ ಸಾಧಿಸಿದೆ ಎಂದರು. ಕೃಷಿ ಇಲಾಖೆ ಅಧಿಕಾರಿ ಜೆ.ಅಶೋಕ್ ಮಾಹಿತಿ ನೀಡಿ, 484 ಎಂ.ಎಂ ಮಳೆ ಅವಶ್ಯಕತೆ ಇದ್ದು 324 ಎಂ.ಎಂ. ಮಳೆಯಾಗಿ, 37ರಷ್ಟು ಮಳೆ ಕೊರತೆ ಇದೆ ಎಂದರು. ಶಾಸಕ ರಘುಮೂರ್ತಿ ಮಧ್ಯಪ್ರವೇಶಿಸಿ ಬೆಳೆವಿಮೆ ಹಣದಲ್ಲಿ ಅಕ್ರಮವೆಸಗಿದ ಅಧಿಕಾರಿ ವಿರುದ್ದ ಕ್ರಮ ಕೈಗೊಂಡ ಬಗ್ಗೆ ಮಾಹಿತಿ ನೀಡಿ ಎಂದು ಸೂಚಿಸಿದರು. ಇದಕ್ಕೆ ಉತ್ತರಿಸಿದ ಅವರು, ಎಸಿ ಅಧ್ಯಕ್ಷತೆಯಲ್ಲಿ ತನಿಖೆ ನಡೆಸಿ ವರದಿ ನೀಡಲಾಗಿದೆ. ಕೃಷಿಭಾಗ್ಯಯೋಜನೆಯನ್ನು ಸರ್ಕಾರ ಮರುಜಾರಿಮಾಡಿದೆ ಎಂದರು.

ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ ಮಾಹಿತಿ ನೀಡಿ, ದಾಳಿಂಬೆ ಮತ್ತು ಬಾಳೆ ಬೆಳೆಗೆ ಹೆಚ್ಚು ಪ್ರೋತ್ಸಾಹ ನೀಡಲಾಗುತ್ತಿದೆ ಎಂದರು. ಆಹಾರ ಇಲಾಖೆ ಅಧಿಕಾರಿ ಶ್ರೀನಿವಾಸ್, 1079 ಬಿಪಿಎಲ್ ಕಾರ್ಡ್‌ಗಳು ಅರ್ಜಿ ಬಂದಿದ್ದು ಆ ಪೈಕಿ 506 ಕಾರ್ಡ್‌ಗಳನ್ನು ನೀಡಲಾಗಿದೆ ಎಂದರು. ಆರೋಗ್ಯ ಇಲಾಖೆ ಅಧಿಕಾರಿ ಎನ್.ಕಾಶಿ, 15 ಪಿಎಚ್‌ಸಿ, 2ಸಿಎಚ್‌ಸಿ ಕಾರ್ಯನಿರ್ವಹಿಸುತ್ತಿದ್ದು, ಪರಶುರಾಮಪುರ, ದೊಡ್ಡಚೆಲ್ಲೂರು ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇದೆ ಎಂದರು. ಭದ್ರಾ ಮೇಲ್ದಂಡೆ ಯೋಜನೆ ಅಧಿಕಾರಿ ಮಾಹಿತಿ ನೀಡಿ, ಕೆಲವೊಂದು ಪ್ರದೇಶದಲ್ಲಿ ನೀರು ಹರಿಸಲು ತೊಂದರೆ ನೀಡುತ್ತಿದ್ದಾರೆ ಎಂದರು. ಇದಕ್ಕೆ ಉತ್ತರಿಸಿ ಶಾಸಕರು ಪೊಲೀಸರ ಸಹಕಾರ ಪಡೆಯುವಂತೆ ಸೂಚಿಸಿದರು. ಮೀನುಗಾರಿಕೆ ಅಧಿಕಾರಿ, ಬೆಸ್ಕಾಂ ಅಧಿಕಾರಿ ರಾಜು, ಅಬಕಾರ ಅಧಿಕಾರಿಗಳು ಮಾಹಿತಿ ನೀಡಿದರು. ಲೋಕೋಪಯೋಗಿ ಇಲಾಖೆ ಅಧಿಕಾರಿ ವಿಜಯಭಾಸ್ಕರ್, ಕಾಪರಹಳ್ಳಿ, ಜಡೇಕುಂಟೆ ಗ್ರಾಮಗಳಲ್ಲಿ ಸಿಮೆಂಟ್ ರಸ್ತೆ ನಿರ್ಮಿಸಲು ಆದೇಶ ದೊರಕಿದೆ ಎಂದರು.

---

# ಕರ್ನಾಟಕದ ಘನತೆ ಹೆಚ್ಚಿಸಿದ ಸಿದ್ಧರಾಮಯ್ಯ

» ಚಿತ್ರದುರ್ಗ



ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಸವ ತತ್ವದಡಿಯ ಸರ್ಕಾರ ಬಸವಣ್ಣ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿ ಕರ್ನಾಟಕದ ಘನತೆಯನ್ನು ಹೆಚ್ಚಿಸಿದೆ ಎಂದು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ತಿಳಿಸಿದ್ದಾರೆ.

ಶತಮಾನಗಳು ಉರುಳಿದರೂ ಈ ಸಮಾಜ ಅಸಮಾನತೆ, ಜಾತಿ ತಾರತಮ್ಯ, ಮೇಲು ಕೀಳು, ಶ್ರೇಷ್ಠ ಕನಿಷ್ಠ ಈ ಬಗೆಯ ನಾನಾ ರೋಗಗಳನ್ನು ತನ್ನ ಬೆನ್ನಿಗೆ ಅಂಟಿಸಿಕೊಂಡೇ ಬರುತ್ತಿದೆ. ಹಿಡಿಯಷ್ಟು ಜನ ಫಲಾನುಭವಿಗಳಾಗಲು ಬಹುಪಾಲು ಜನ ತೊಂದರೆ ಅನುಭವಿಸಬೇಕಾದ ಪರಿಪಾಠ ಇಂದಿಗೂ ನಿಂತಿಲ್ಲ, ಇರಲಿಕ್ಕೊಂದು ಸಾರು, ತೊಡಲಿಕ್ಕೊಂದು ಬಟ್ಟೆ, ದುಡಿಯಲಿಕ್ಕೊಂದು ಕಾಯಕ ಒದಗಿಸಲಾರದ ಈ ಸಮಾಜ ದ್ವೇಷಾಸೂಯೆಗಳನ್ನು ಮಾತ್ರ ಮುಂದಿನ ಶತಮಾನಗಳಿಗೂ ಹೆಚ್ಚಾಗುವಷ್ಟು ಬಿತ್ತುತ್ತಿದೆ. ಇದು ಬಹಳ ಆತಂಕದ ವಿಚಾರ. ಬಸವಣ್ಣನಂತಹ ಶ್ರೇಷ್ಠ ಚಿಂತಕ ಹನ್ನೆರಡನೇ ಶತಮಾನದಲ್ಲಿ ನಮ್ಮ ನಾಡಿಗೆ ಕೊಟ್ಟ ಅರಿವು ಜಾಗತಿಕ ಮಟ್ಟದಲ್ಲಿ ಯಾವ ಭೂಭಾಗದಲ್ಲಿ ಕೊಟ್ಟಿರಲಾರರು. ಶತಮಾನಗಳ ಹಿಂದಿನ ಅವರು ನೀಡಿದ ಅರಿವಿನ ವಚನಗಳ ಸಾರ ಇಂದಿಗೂ ಪ್ರಸ್ತುತವಾಗಿದೆ. ಅವರು ನಿಜವಾದ ಅರ್ಥದಲ್ಲಿ ಸಮಾಜೋ–ಧಾರ್ಮಿಕ ಸುಧಾರಕರು. ಅವರ ವಚನಗಳು ಉದಾತ್ತ ಚಿಂತನೆಗಳಿಂದ ಕೂಡಿವೆ. ನಮ್ಮ ಬುದ್ಧಿ ಮನಸ್ಸುಗಳನ್ನು ಕ್ರಿಯಾಶೀಲವಾಗಿಸುವ, ಚೈತನ್ಯ ತುಂಬುವ ಒಂದು ಅದ್ಭುತ ಶಕ್ತಿ. ಅವರ ಚಿಂತನೆ ನಮಗೆ ಆದರ್ಶಗಳು, ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಪ್ರೇರಣೆ ನೀಡುತ್ತದೆ ಎಂದು ಹೇಳಿದ್ದಾರೆ. ಜನಭಾಷೆಯನ್ನು ದೇವ ಭಾಷೆಯನ್ನಾಗಿಸಿದ ಶಿಷ್ಟದಿಂದ ಪರಿಶಿಷ್ಟದ ಕಡೆಗೆ, ಕೇಂದ್ರದಿಂದ ಅಂಚಿನ ಕಡೆಗೆ, ಪುರುಷ ಶಾಹಿಯಿಂದ ಲಿಂಗ ಸಂಬಂಧಿ ಸಮಾನತೆ ಕಡೆಗೆ, ಏಕರೂಪಿ ಸಮಾನತೆಯಿಂದ ಬಹುರೂಪಿ ಸಮಾನತೆಗೆ ಕಡೆಗೆ, ಆಲಯದಿಂದ ಬಯಲ ಕಡೆಗೆ ಹರಿಯುವಂತೆ–ಸರಿಯುವಂತೆ ಮಾಡುವಲ್ಲಿ ಬಸವ ಸಂಸ್ಕೃತಿಯ ಕಾಣಿಕೆ ಅಪಾರವಾಗಿದೆ ಎಂದು ತಿಳಿಸಿದ್ದಾರೆ. ಬಹುಸಂಖ್ಯೆಯ ಶಿವಶರಣರು–ಶರಣೆಯರು ವಿವಿಧ ಕಾಯಕ ಜಾತಿಯ ಸಂಸ್ಕೃತಿಯ ರಾಯಬಾರಿಗಳು. ಬಹುಜಾತಿಯ ಸಂಸ್ಕೃತಿಯ ರಾಯಭಾರಿಗಳ ನಾಯಕ ಬಸವಣ್ಣ. ಶಿವಶರಣರೇ ಒಪ್ಪುವಂತೆ ಅವರೆಲ್ಲರ ಸಾಂಸ್ಕೃತಿಕ ನಾಯಕ ಬಸವಣ್ಣ ಎಂಬುದು ಸಮರ್ಥನೀಯ ಎಂದು ಹೇಳಿದ್ದಾರೆ.

ಈ ಜಗತ್ತಿಗೆ ಸಮಾನತೆಯ ಸಂದೇಶ ಸಾರಿದ, ತಾರತಮ್ಯಗಳನ್ನು ಮೀರಬೇಕೆಂದು ಹೇಳಿದ, ಬದುಕನ್ನು ಕಾಯಕ ಪ್ರಧಾನವಾಗಿ ರೂಪಿಸಿಕೊಳ್ಳಬೇಕೆಂದು ನೀವೇದಿಸಿಕೊಂಡ ವಿಶ್ವ ಮಾನವತಾವಾದಿ, ಎಲ್ಲ ನೊಂದ ಜನರಿಗೆ ಆತ್ಮವಿಶ್ವಾಸ ನೀಡುವ ಮನ್ವಂತರ ಪ್ರವರ್ತಕ ಬಸವಣ್ಣ, ನಮ್ಮ ರಾಜ್ಯದ ಸಾಂಸ್ಕೃತಿಕ ನಾಯಕ ಅಂತ ಘನತೆಯಿಂದ ಗೌರವದಿಂದ ಗರ್ವದಿಂದ ಹೇಳೋಣ ಎಂದು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ತಿಳಿಸಿದ್ದಾರೆ.

---

## ಬಾಲಕಾರ್ಮಿಕ ಕುರಿತು ದೂರು: ತಪಾಸಣೆ



» ಚಿತ್ರದುರ್ಗ

ಮಕ್ಕಳ ಸಹಾಯವಾಣಿ 1098 ಹಾಗೂ ಸಾರ್ವಜನಿಕರ ಮೂಲಕ ದೂರು ಬಂದ ಹಿನ್ನಲೆಯಲ್ಲಿ, ಅಧಿಕಾರಿಗಳ ತಂಡ ಮೊಳಕಾಲ್ಮೂರು ತಾಲ್ಲೂಕಿನ ಸಹನಾ ಫೌಲ್ಟ್ರಿ ಫಾರಂನಲ್ಲಿ ಬಾಲಕಾರ್ಮಿಕ ತಪಾಸಣೆ ನಡೆಸಿದೆ. ಮೊಳಕಾಲ್ಮುರು ತಹಶೀಲ್ದಾರ್ ಅವರೊಂದಿಗೆ ಚರ್ಚಿಸಿ ಜ.17ರಂದು ಸಂಜೆ 7.50ಕ್ಕೆ ವಿವಿಧ ಇಲಾಖೆಗಳ ಅಧಿಕಾರಿಗಳ ತಂಡ ಪೌಲ್ಟ್ರಿ ಫಾರಂ ಭೇಟಿ ನೀಡಿತು. ರಾತ್ರಿ 9.30ರ ವರೆಗೆ ಪರಿಶೀಲನೆ ನಡೆಸಿದೆ. ಈ ಸಮಯದಲ್ಲಿ ಯಾವುದೇ ಮಕ್ಕಳು ಕೆಲಸ ಮಾಡುತ್ತಿರುವುದು ಕಂಡುಬಂದಿಲ್ಲ. ಪೌಲ್ಟ್ರಿಯಲ್ಲಿ ಯಾವುದೇ ಮಕ್ಕಳು ಕೆಲಸ ಮಾಡುತ್ತಿಲ್ಲ ಎನ್ನುವುದನ್ನು ಖಚಿತ ಪಡಿಸಿಕೊಳ್ಳಲಾಯಿತು.

ದಾಳಿಯಲ್ಲಿ ಕಾರ್ಮಿಕ ನಿರೀಕ್ಷಕಿ ಟಿ.ಕುಸುಮ, ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕರು ಪಿ.ಸತೀಶ್ ಕುಮಾರ್, ಸಿಡಿಪಿಓ ನವೀನ್, ಶಿಕ್ಷಣ ಇಲಾಖೆ ಸಿಆರ್‌ಪಿ ಶರಣಪ್ಪ, ಟಿ ಬಿ ಮುಕ್ಕಣ್ಣ, ಸಿಆರ್‌ಪಿ ಎಸ್.ಲೋಕೇಶ್ ಎಎಸ್‌ಐ ಶಿವಕುಮಾರ್ ನಾಯ್ಕ, ಪೊಲೀಸ್ ಸಿಬ್ಬಂದಿ ಇದ್ದರು.

---



## ನೂತನ ಬಿಜೆಪಿ ಜಿಲ್ಲಾಧ್ಯಕ್ಷರಿಗೆ ಅಭಿನಂದನೆ

**ಚಿತ್ರದುರ್ಗ:** ಎರಡನೆ ಬಾರಿಗೆ ಬಿಜೆಪಿ.ಜಿಲ್ಲಾಧ್ಯಕ್ಷರಾಗಿ ಮರು ನೇಮಕವಾಗಿರುವ ಎ.ಮುರಳಿರವರಿಗೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್‌ರವರು ಶುಕ್ರವಾರ ಪಕ್ಷದ ಕಚೇರಿಯಲ್ಲಿ ಶಾಲು ಹೊದಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸೌಭಾಗ್ಯ ಬಸವರಾಜನ್ ದೇಶದ ಪ್ರಧಾನಿ ನರೇಂದ್ರಮೋದಿರವರು ಕೊಟ್ಟಂತಹ ಯೋಜನೆಗಳನ್ನು ಇಲ್ಲಿಯವರೆಗೂ ಆಳಿದ ಯಾವ ಪ್ರಧಾನಿಯೂ ನೀಡಿಲ್ಲ. ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ.ಗೆ ಜನರಲ್ಲಿ ಉತ್ತಮ ಒಲವಿದೆ. ಹಾಗಾಂತ ಮೈಮರೆತು ಕೂರುವಂತಿಲ್ಲ. ಕಳೆದ ಅವಧಿಯ ನಿಮ್ಮ ಪಕ್ಷ ಸಂಘಟನೆಯನ್ನು ಗುರುತಿಸಿ ನಾಯಕರು ಎರಡನೆ ಅವಧಿಗೆ ಜಿಲ್ಲಾಧ್ಯಕ್ಷ ಸ್ಥಾನವನ್ನು ವಹಿಸಿದ್ದಾರೆ.

---

**ಪ್ರಮುಖ ಸುದ್ದಿ**

# ಕ್ಯಾತಪ್ಪ ಗುಡಿ ನಿರ್ಮಾಣಕ್ಕೆ ಪೂಜೆಮರ ಕಡಿದ ಭಕ್ತ ಸಮೂಹ

» ಚಳ್ಳಕೆರೆ



ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿ ಗ್ರಾಮದ ವಸಲುದಿನ್ನೆಯಲ್ಲಿ ನಡೆಯುವ ಕಾಡುಗೊಲ್ಲರ ಆರಾಧ್ಯ ದೈವ ಕ್ಯಾತಪ್ಪನ ಜಾತ್ರೆಗೆ ಸಕಲ ಸಿದ್ದತೆ ನಡೆಯುತ್ತಿದೆ. ಗುರುವಾರ ಮುಳಿನ ಗುಡಿಕಟ್ಟಲು ಪೂಜೆಮರ ಕತ್ತರಿಸುವ ಕಾರ್ಯ ಶ್ರದ್ಧಾಭಕ್ತಿಯಿಂದ ನಡೆಯಿತು.

ತಾಲ್ಲೂಕಿನ ಕಾಟಪ್ಪನಹಟ್ಟಿಯಿಂದ ಮರವಾಯಿ, ಗುಡಿಹಳ್ಳಿ ವಂಶಸ್ಥರು ಒಪ್ಪೊತ್ತಿನಲ್ಲೇ ಕಾಲ್ನಡಿಗೆ ಮೂಲಕ ಬೊಮ್ಮನಕುಂಟೆ ಗ್ರಾಮಕ್ಕೆ ತೆರಳಿ ಗುಡಿ ನಿರ್ಮಿಸಲು ಈಗಾಗಲೇ ಗುರುತಿಸಿದ್ದ ಪೂಜೆಮರ(ಹತ್ತಿಮರ) ಕತ್ತರಿಸಿ ವಸಲು ದಿನ್ನೆಗೆ ತರುವುದು ವಾಡಿಕೆ. ವಾಡಿಕೆಯಂತೆ ನೂರಾರು ಭಕ್ತರೊಂದಿಗೆ ಮರವಿರುವ ಸ್ಥಳಕ್ಕೆ ತೆರಳಿ ಸಂಪ್ರದಾಯದಂತೆ ಮರದ ಸುತ್ತ ಸಗಣಿ ನೀರಿನಿಂದ ಸ್ವಚ್ಚಗೊಳ್ಳಿ, ರಂಗೋಲಿ, ವಿವಿಧ ಹೂಗಳಿಂದ ಸಿಂಗಾರಿಸಿ, ಕಾಯಿ, ಬಾಳೆ ಹಣ್ಣಿನ ಮೂಲಕ ಪೂಜೆ ಸಲ್ಲಿಸಿ ಮರ ಕಡಿಯಲು ಪ್ರಾರಂಭಿಸುತ್ತಾರೆ. ಕೆಲವೇ ಗಂಟೆಗಳಲ್ಲಿ ಮರ ಕತ್ತರಿಸಿ ನೆಲಕ್ಕೆ ತಾಕದಂತೆ ಕರಿಕಂಬಳಿಯಿಂದ ಗದ್ದಿಗೆ ನಿರ್ಮಿಸಿ ಅದರ ಮೇಲೆ ಇಡಲಾಗುತ್ತದೆ. ಪುನಃ ಮರಕ್ಕೆ ಪೂಜಾ ವಿಧಿವಿಧಾನಗಳನ್ನು ನಡೆಸಿ ನೆರೆದಿದ್ದ ಭಕ್ತರಿಗೆ ಅನ್ನ ದಾಸೋಹ ನಡೆಸಲಾಗುತ್ತದೆ. ಸೇರಿದ್ದ ಎಲ್ಲಾ ಭಕ್ತರು ದಾಸೋಹದಲ್ಲಿ ಭಾಗವಹಿಸಿ ಪುನೀತರಾದರು. ಕತ್ತರಿಸಿದ ಪೂಜೆಮರವನ್ನು ಕಾಲ್ನಡಿಗೆ ಮೂಲಕವೆ ಹೊತ್ತು ಜಾತ್ರೆ ನಡೆಯುವ ಸ್ಥಳಕ್ಕೆ ತರಲಾಗುತ್ತದೆ.

ಈ ಬಗ್ಗೆ ಮಾಹಿತಿ ನೀಡಿದ ಗುಡಿಹಳ್ಳಿ ವಂಶದ ಎಚ್.ಮಹಲಿಂಗಪ್ಪ, ಕಾಡುಗೊಲ್ಲ ಸಮುದಾಯದ ಕ್ಯಾತಪ್ಪನ ಜಾತ್ರೆ ಸಂಪ್ರದಾಯಿಕ ಕಟ್ಟುಪಾಡು, ನಿಯಮಗಳಾನುಸಾರ ಹತ್ತು ದಿನಗಳಕಾಲ ನಡೆಸಲಾಗುತ್ತದೆ. ಜ.24 ರಂದು ಪೂಜೆಮರದಿಂದ ಗುಡಿ ನಿರ್ಮಿಸಿ, 26ರಂದು ಕಳಸ ಕೀಳುವ ಕಾರ್ಯಕ್ರಮ ನಡೆಯಲಿದೆ. ಜಾತ್ರೆಗೆ ಜಿಲ್ಲೆಯೂ ಸೇರಿದಂತೆ ಆಂಧ್ರ ಪ್ರದೇಶದಿಂದಲ್ಲೂ ನೂರಾರು ಭಕ್ತರು ಆಗಮಿಸುವರು. ಹತ್ತು ದಿನಗಳಕಾಲ ಹಲವಾರು ಕಾರ್ಯಕ್ರಮಗಳು ಕಾಡುಗೊಲ್ಲ ಕಟ್ಟುಪಾಡುಗಳಂತೆ ನಡೆಯುತ್ತವೆ ಎಂದರು. ಕ್ಯಾತಣ್ಣ, ಗೋವಿಂದಪ್ಪ, ಮರವಾಯಿ ಅಜ್ಜಯ್ಯ, ವೆಂಕಟೇಶ, ವೀರೇಶ್ ಉಪಸ್ಥಿತಿರಿದ್ದರು.

## ಫಾಸ್ಟ್ ನ್ಯೂಸ್

### ಜ.21ರಂದು ಅಂಬಿಗರ ಚೌಡಯ್ಯ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಇದೇ ಜ.21ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆ ಸಮಾರಂಭ" ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಸಚಿವ ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಘನಉಪಸ್ಥಿತಿವಹಿಸುವರು. ಯೋಜನಾಮತ್ತುಸಾಂಖ್ಯಿಕಸಚಿವರುಹಾಗೂಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಜಿಲ್ಲಾ ಗಂಗಾಬಿಕಾ ಬೆಸ್ತರ ಸಂಘದ ಅಧ್ಯಕ್ಷ ಹೆಚ್.ಡಿ. ರಂಗಯ್ಯ, ಕಾರ್ಯದರ್ಶಿ ಪಿ. ಶ್ರೀನಿವಾಸ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಗಂಗಾಂಭಿಕಾ ಬೆಸ್ತರ ಸಮಾಜದ ಮುಖಂಡರು, ಗಣ್ಯರು ಭಾಗವಹಿಸಲಿದ್ದಾರೆ. ಚಿತ್ರದುರ್ಗದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಬಿ.ಎಂ. ಗುರುನಾಥ ಉಪನ್ಯಾಸ ನೀಡುವರು. ಮೊಳಕಾಲ್ಮುರು ತಾಲ್ಲೂಕು ಹಿರೇಕೆರೆಹಳ್ಳಿಯ ಲೋಕೇಶ್ ಪಲ್ಲವಿ ಅವರಿಂದ ಗೀತಗಾಯನ ನಡೆಯಲಿದೆ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಮಾಜಿ ಸೈನಿಕ ದೃಢೀಕರಣ ಪಡೆಯಲು ಕೋರಿಕೆ

» ಚಿತ್ರದುರ್ಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮಾಜಿ ಸೈನಿಕರ ಮಕ್ಕಳ ವೃತ್ತಿ ವೃತ್ತಿಪರ ಶಿಕ್ಷಣಗಳ ದಾಖಲಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಅರ್ಜಿ ಕರೆಯಲಾಗಿದ್ದು, 2024ನೇ ಸಾಲಿನಿಂದ ಮಾಜಿ ಸೈನಿಕ ಖೋಟಾದಡಿಯಲ್ಲಿ ಅರ್ಜಿ ಸಲ್ಲಿಸಲು ಮಾಜಿ ಸೈನಿಕ ದೃಢೀಕರಣ ಪತ್ರವನ್ನು ಅರ್ಜಿಯೊಂದಿಗೆ ಮುಂಗಡವಾಗಿಯೇ ಸಲ್ಲಿಸಬೇಕಾಗಿರುವುದರಿಂದ ಅವಶ್ಯಕ ದಾಖಲೆಗಳೊಂದಿಗೆ ಸೇವಾ ಸಿಂಧು ಜಾಲತಾಣದಲ್ಲಿ ಅರ್ಜಿ ಸಲ್ಲಿಸಿ ಪಡೆದುಕೊಳ್ಳಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ದೂರವಾಣಿ ಸಂಖ್ಯೆ 08182-220925 ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಕ ಡಾ. ಸಿ.ಎ.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರಡಿ ಸಂಚಾರ; ಆತಂಕ



» ಹೊಸದುರ್ಗ

ಸಂಜೆಯ ಇಳಿಮುಖವಾಗುತ್ತಿದ್ದಂತೆ ಮಠದ ಆವರಣದಲ್ಲಿ ಕರಡಿಗಳ ಓಡಾಟ ಜೋರಾಗಿದೆ, ಮಠದ ಭಕ್ತರು, ಸಾರ್ವಜನಿಕರು ಆತಂಕಕ್ಕೊಳಗಾಗಿದ್ದಾರೆ.ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನ ಮಠದ ಆವರಣದಲ್ಲಿ ಕಳೆದ 6 ತಿಂಗಳಿಂದ ಸಾಮಾನ್ಯವಾಗಿ ಸಂಜೆಯಾಗುತ್ತಲೇ ಒಂದೂ, ಎರಡು ಕರಡಿಗಳು ಕಾಣಿಸಿಕೊಳ್ಳುತ್ತಿವೆ. ಮಠದ ಬಾಗಿಲಿನವರೆಗೆ ಬಂದು ಹೋಗಿರುವ ವಿಡಿಯೋಗಳು ಸಾಕಷ್ಟು ವೈರಲ್ ಆಗಿವೆ.ಜ.18 ಗುರುವಾರ ರಾತ್ರಿ 9 ಗಂಟೆ ಸುಮಾರಿಗೆ ಕರಡಿಯೊಂದು ಮಠದ ಆವರಣದಲ್ಲಿ ಓಡಾಟವನ್ನು ಮಾಡಿದ್ದು ಮಠದಲ್ಲಿನ ಸಿ.ಸಿ.ರಸ್ತೆಯ ಮುಂಭಾಗ ಹಾಗೂ ಹಿಂಬದಿಯಲ್ಲಿ ಓಡಾಡಿ ಮತ್ತೆ ಮರೆಯಾಗುವ ವಿಡಿಯೋವನ್ನು ಮಠದ ಸಿಬ್ಬಂದಿ ಸೆರೆ ಹಿಡಿದಿದ್ದಾರೆ.ಕುಂಚಿಟಿಗ ಮಠದ ಶ್ರೀ ಶಾಂತವೀರ ಸ್ವಾಮೀಜಿ ಹಲವು ಬಾರಿ ಕರಡಿಗಳನ್ನು ಸೆರೆಹಿಡಿದು ಮುಂದೆ ಆಗುವ ಅಪಾಯವನ್ನು ತಡೆಯುವಂತೆ ಮನವಿ ಮಾಡಿದರೂ ಅರಣ್ಯ ಇಲಾಖೆ ಸಿಬ್ಬಂದಿ ಉದಾಸೀನ ತೋರುತ್ತಿದ್ದಾರೆ ಎಂದು ಭಕ್ತರು ಅಸಮಧಾನ ವ್ಯಕ್ತಪಡಿಸಿದ್ದಾರೆ. ಕರಡಿ ಅತ್ಯಂತ ಅಪಾಯಕಾರಿ ಪ್ರಾಣಿಯಾಗಿದ್ದು, ಜನವಸತಿ, ಮಠದ ಸಮೀಪದಲ್ಲೇ ಅಡ್ಡಾಡುವುದು ಆತಂಕದ ಸಂಗತಿಯಾಗಿದೆ. ಈ ಹಿನ್ನೆಲೆಯಲ್ಲಿ ಹೊಸದುರ್ಗದ ಅರಣ್ಯ ಇಲಾಖೆ ಸಿಬ್ಬಂದಿ ಕರಡಿ ಸೆರೆ ಹಿಡಿದು ಬೇರೆಡೆಗೆ ಸಾಗಿಸಬೇಕು.

### ತ್ರೈಮಾಸಿಕ ಕೆ.ಡಿ.ಪಿ ಸಭೆ

» ದಾವಣಗೆರೆ

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಕೆ.ಎಸ್.ಬಸವಂತಪ್ಪ ಇವರ ಅಧ್ಯಕ್ಷತೆಯಲ್ಲಿ ಜ.22 ರಂದು ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಆಯೋಜಿಸಲಾಗಿದೆ.

### ಜ.20 ಹಾಗೂ 21 ರಂದು ವಾಣಿಜ್ಯ ತೆರಿಗೆ ಪರೀವೀಕ್ಷಕ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ

# ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಸೇರಿದಂತೆ ಎಲ್ಲಾ ರೀತಿಯ ಉಪಕರಣಗಳ ಬಳಕೆಗೆ ನಿಷೇಧ: ಎಡಿಸಿ ಬಿ.ಟಿ.ಕುಮಾರಸ್ವಾಮಿ

» ಚಿತ್ರದುರ್ಗ

ಜನವರಿ 20 ಹಾಗೂ 21 ರಂದು ವಾಣಿಜ್ಯ ತೆರಿಗೆ ಇಲಾಖೆಯಲ್ಲಿನ ಉಳಿಕೆ ಮೂಲ ವೃಂದದ ವಾಣಿಜ್ಯ ತೆರಿಗೆ ಪರಿವೀಕ್ಷಕ ಹುದ್ದೆಗಳ ನೇಮಕಾತಿಗಾಗಿ ಕೆ.ಪಿ.ಎಸ್.ಸಿ (ಕರ್ನಾಟಕ ಲೋಕಸೇವಾ ಆಯೋಗ) ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಪರೀಕ್ಷೆ ಕೇಂದ್ರಗಳಿಗೆ ಅಭ್ಯರ್ಥಿಗಳುಮೊಬೈಲ್,ಕ್ಯಾಲ್ಯುಕಲೇಟರ್, ಬ್ಲೂಟೂತ್, ಸ್ಮಾರ್ಟ್ ವಾಚ್, ಎಲೆಕ್ಟ್ರಾನಿಕ್ ಉಪಕರಣ ಸೇರಿದಂತೆ ಯಾವುದೇ ರೀತಿ ಗ್ಯಾಜೆಟ್‌ಗಳನ್ನು ತರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಎಲ್ಲಾ ಕೇಂದ್ರಗಳಲ್ಲಿ ಪರೀಕ್ಷಾ ಅಕ್ರಮ ತಡೆಯಲು ಮೊಬೈಲ್ ಜಾಮರ್ ಹಾಗೂ ಸಿ.ಸಿ.ಟಿ.ವಿ ಅಳವಡಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಜರುಗಿದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಪರೀಕ್ಷಾ ಸಂಬಂಧ ಕೆಪಿಎಸ್‌ಸಿ ಅಭ್ಯರ್ಥಿಗಳಿಗೆ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಈ ಮಾರ್ಗಸೂಚಿಗಳನ್ನು ಪ್ರವೇಶ ಪತ್ರದಲ್ಲಿಯೂ ಸ್ಪಷ್ಟವಾಗಿ ಮುದ್ರಿಸಲಾಗಿದೆ. ಅಭ್ಯರ್ಥಿಗಳು ಈ ನಿಬಂಧನೆಗಳಿಗೆ ಆನ್‌ಲೈನ್ ಮೂಲಕ ಒಪ್ಪಿಗೆ ಸೂಚಿಸಿದ ನಂತರವೇ ಪ್ರವೇಶ ಪತ್ರದ ಮುದ್ರಣದ ಪ್ರತಿ ಲಭ್ಯವಾಗುತ್ತದೆ.

ಇದರ ಅನ್ವಯ ಅಭ್ಯರ್ಥಿಗಳು ಶೂ, ಸಾಕ್ಸ್, ಸ್ವೆಟರ್, ಜರ್ಕಿನ್, ಬ್ಲೂಟುತ್, ವೈಟ್ ಫ್ಲೂಯಿಡ್, ವೆರೆಲೆಸ್ ಸೆಟ್, ಪೇಪರ್, ಬುಕ್ಸ್, ತುಂಬು ತೋಳಿನ ಶರ್ಟ್, ಟಿ ಶರ್ಟ್ ಹಾಗೂ ಯಾವುದೇ ರೀತಿ ಆಭರಣಗಳನ್ನು ಧರಿಸುವಂತಿಲ್ಲ. ಕುಡಿಯುವ ನೀರಿನ ಬಾಟೆಲ್, ಕಿವಿ ಹಾಗೂ ಬಾಯಿ ಮುಚ್ಚಿಕೊಳ್ಳುವಂತಿರುವ ಫ್ಲಿಲ್ಟರ್ ಇರುವ ಪೇಸ್ ಮಾಸ್ಕ್‌ಗಳನ್ನು ಸಹ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಸದಾ ಉಡುಗೆಯಲ್ಲಿ ಪರೀಕ್ಷೆ ಬರೆಯಲು ಆಗಮಿಸಬೇಕು. ಮದುವೆಯಾದ ಹೆಣ್ಣುಮಕ್ಕಳು ಮಂಗಳಸೂತ್ರ ಹಾಗೂ ಕಾಲುಂಗುರ ಧರಿಸಿ ಬರಲು ಅವಕಾಶವಿದೆ. ಈ ನಿಬಂಧನೆಗಳನ್ನು ಅಭ್ಯರ್ಥಿಗಳು ಪಾಲಿಸುವುದು ಕಡ್ಡಾಯವಾಗಿದೆ ಎಂದರು.



ಪರೀಕ್ಷಾ ಕೇಂದ್ರದ ಸುತ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಇದಕ್ಕೆ ಪೂರಕವಾಗಿ ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಗೊಳಿಸಲಾಗುವುದು. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ತೆರಳುವ ಮುಂಚೆ ಸೂಕ್ತವಾಗಿ ತಪಾಸಣೆ ನಡೆಸಬೇಕು. ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕು ಪ್ರಶ್ನೆಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆನೀಡಬೇಕು.ಪ್ರತಿಕೊಠಡಿಯಲ್ಲಿ ಸಿ.ಸಿ.ಟಿ.ವಿ ಅಳವಡಿಸಿರುವುದರಿಂದ ಮೇಲ್ವಿಚಾರಕರು ಜಾಗರೂಕತೆಯಿಂದ ಕರ್ತವ್ಯ ನಿರ್ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಪರೀಕ್ಷಾ ಕಾರ್ಯ ಮುಗಿದ ನಂತರ ಬೆಳಗಿನ ಅವಧಿ ಉತ್ತರ ಪತ್ರಿಕೆಗಳನ್ನು ಮತ್ತು ಮಧ್ಯಾಹ್ನ ಅವಧಿಯ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಅಧಿವೇಶನವಾರು ಆಯಾ ಅಧೀವೇಶನದ ಪರೀಕ್ಷೆ ಮುಗಿದ ನಂತರ ಅಂಚೆ ಕಚೇರಿಯ ಮೂಲಕ ಆಯೋಗಕ್ಕೆ ಸುರಕ್ಷಿತವಾಗಿ ತಲುಪಿಸಬೇಕು. ಅಂಚೆ ಇಲಾಖೆ ಅಧಿಕಾರಿಗಳಿಗೆ ಸಂಜೆ 6 ಗಂಟೆಯವರೆಗೂ ಪ್ರಧಾನ ಅಂಚೆ ಕಚೇರಿಯನ್ನು ತರೆದು ಸಹರಿಸುವಂತೆ ಅಪರ ಜಿಲ್ಲಾಧಿಕಾರಿ ಹೇಳಿದರು.

ಪರೀಕ್ಷಾ ಕೇಂದ್ರದಲ್ಲಿ ಹೆಲ್ತ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸಿ, ಆರೋಗ್ಯ ತಪಾಸಣೆಗಾಗಿ ಆರೋಗ್ಯ ಸಹಾಯಕರನ್ನು ನಿಯೋಜಿಸಬೇಕು. ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಜಾಮರ್, ಸಿ.ಸಿ.ಟಿ.ವಿ ಕ್ಯಾಮರಾಗಳು ಸುಸ್ಥಿತಿಯಲ್ಲಿಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಪೊಲೀಸ್ ಇಲಾಖೆ ವತಿಯಿಂದ ಪ್ರತಿ ಪರೀಕ್ಷಾ ಕೇಂದ್ರಗಳಿ ಪೊಲೀಸ್ ಸಿಬ್ಬಂದಿ ಹಾಗೂ ತಪಾಸಣೆಗಾಗಿ ಒರ್ವ ಪುರಷ ಹಾಗೂ ಓರ್ವ ಮಹಿಳಾ ಗೃಹ ರಕ್ಷಕರನ್ನು ಹೆಚ್ಚುವರಿಯಾಗಿ ನೇಮಿಸುವಂತೆ ನಿರ್ದೇಶನನೀಡಿದರು.ಹೆಚ್ಚುವರಿಪೊಲೀಸ್ ವರಿಷ್ಠಾಧಿಕಾರಿ ಹೆಚ್.ಜೆ.ಕುಮಾರಸ್ವಾಮಿ ಮಾತನಾಡಿ, ಯಾವುದೇ ಪರೀಕ್ಷಾ ಕೇಂದ್ರಗಳಲ್ಲಿ ಗೊಂದಲ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆ ಬಂದರೆ, ಸಂಬಂಧಪಟ್ಟ ಪರೀಕ್ಷಾ ಕೇಂದ್ರ ಮೇಲ್ವಿಚಾರಕರು ತಕ್ಷಣ ಪೊಲೀಸರಿಗೆ ಕರೆ ಮಾಡಿ ತಿಳಿಸುವಂತೆ ಹೇಳಿದರು.ಜನವರಿ 20 ರಂದು ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ಕನ್ನಡ ಭಾಷಾ ಪರೀಕ್ಷೆ ನಗರದ 10 ಕೇಂದ್ರಗಳಲ್ಲಿ ನಡೆಯಲಿದೆ. ಒಟ್ಟು 3631 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಜನವರಿ 21 ರಂದು ಬೆಳಿಗ್ಗೆ 10 ರಿಂದ 11.30 ರವರೆಗೆ ಸಾಮಾನ್ಯ ಜ್ಞಾನದ ಪರೀಕ್ಷೆ ಹಾಗೂ ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲಿಷ್, ಕಂಪ್ಯೂಟರ್ ಜ್ಞಾನ ವಿಷಯಗಳ ಪರೀಕ್ಷೆ ಒಟ್ಟು 14 ಕೇಂದ್ರಗಳಲ್ಲಿ ನಡೆಯಲಿದೆ. ಒಟ್ಟು 5337 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಚಂದ್ರಶೇಖರ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಡಯಟ್ ಉಪನಿರ್ದೇಶಕ ನಾಸಿರುದ್ದಿನ್ ಸೇರಿದಂತೆ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ಮಾರ್ಗಾಧಿಕಾರಿಗಳು, ಜಿಲ್ಲಾ ಖಜನಾಧಿಕಾರಿಗಳು, ಅಂಚೆ ಇಲಾಖೆ ಅಧಿಕಾರಿಗಳು ಇದ್ದರು.

# ಬಾಲ್ಯವಿವಾಹ ಮಾಡಬೇಡಿ ಶಿಕ್ಷೆಗೆ ಗುರಿಯಾಗಬೇಡಿ: ಹೆಚ್ಇಒ ಮಂಜುನಾಥ್

» ಚಿತ್ರದುರ್ಗ

ಬಾಲ್ಯ ವಿವಾಹ ಮಾಡುವುದು ಶಿಕ್ಷಾರ್ಹ ಅಪರಾಧವಾದರೂ ಇನ್ನೂ ಕೂಡ 18 ವರ್ಷದ ಒಳಗಡೆ ಹೆಣ್ಣು ಮಕ್ಕಳಿಗೆ ಮದುವೆ ಮಾಡುತ್ತಿರುವುದು ಮುಂದುವರಿಯುತ್ತಲೇ ಇರುವುದುತುಂಬಾವಿಷಾದನೀಯ.ಬಾಲ್ಯವಿವಾಹ ಮಾಡಬೇಡಿ ಶಿಕ್ಷೆಗೆ ಗುರಿಯಾಗಬೇಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಲಕ್ಷ್ಮೀಸಾಗರ-ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ವಿಜಾಪುರ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಗುರುವಾರ ಆಯೋಜಿಸಿದ್ದ ತಾಯಂದಿರ ಸಭೆಯಲ್ಲಿ ಅವರು ಮಾತನಾಡಿದರು.

ತಾಯಿ ಮರಣ ಮತ್ತು ಶಿಶು ಮರಣಕ್ಕೆ ಕಡಿವಾಣ ಹಾಕಬೇಕಾದರೆ ಬಾಲ್ಯ ವಿವಾಹವನ್ನು ಮೊದಲು ತಡೆಯಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ಮಾತನಾಡಿ, ದೈಹಿಕವಾಗಿ ಬೌದ್ಧಿಕವಾಗಿ ಬೆಳವಣಿಗೆ ಹೊಂದದಿರುವ ಬಾಲಕಿಯರು ವಿವಾಹವಾದರೆ ಹಲವು ಸ್ವರೂಪದ ಸಮಸ್ಯೆಗಳು ಉಲ್ಬಣವಾಗುತ್ತವೆ. ರಕ್ತಹೀನತೆ, ಅಪೌಷ್ಟಿಕತೆ, ಕಡಿಮೆ ಹುಟ್ಟುತೂಕದ ಮಕ್ಕಳ ಜನನ, ತಾಯಿ ಮರಣ ಮತ್ತು ಶಿಶು ಮರಣ ಆಗಬಹುದು. "ಬಾಲ್ಯ ವಿವಾಹ ಮಾಡಬೇಡಿ ಬಾಲಕಿಯರನ್ನು ಸಾವಿನ ದವಡೆಗೆ ದೂಡಬೇಡಿ" ಉಚಿತ ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ಬಾಲ್ಯ ವಿವಾಹವನ್ನು ತಡೆಯಬಹುದು. ದೂರು ನೀಡಿದವರ ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುವುದು. ಯಾರು ಆತಂಕ ಪಡದೆ ಬಾಲ್ಯ ವಿವಾಹದ ಸುಳಿವು ಸಿಕ್ಕಲ್ಲಿ ಸಹಾಯವಾಣಿಗೆ ಕರೆ ಮಾಡುವುದರ ಮುಖಾಂತರ ಬಾಲ್ಯ ವಿವಾಹ ತಡೆಯಲು ಮುಂದೆ ಬರಬೇಕು. ಇದೇ ರೀತಿ ಇಳಿ ವಯಸ್ಸಿನಲ್ಲಿ ಹೆಣ್ಣು ಮಕ್ಕಳಿಗೆ ಮದುವೆ ಮಾಡುವುದು ಮುಂದುವರಿದರೆ ಮುಂದಿನ ದಿನಗಳಲ್ಲಿ ತಾಯಿ ಮರಣ ಹೆಚ್ಚುವ ಸಂಭವ ಇದೆ. ತಾಯಿ ಮರಣವಾದರೆ ಮಕ್ಕಳು ಅನಾಥರಾಗಿ ಕುಟುಂಬದಲ್ಲಿ ಅಶಾಂತಿ ತಲೆದೋರಿ ಮಾನಸಿಕ ನೆಮ್ಮದಿ ಕೊರತೆಯಾಗಿ ಕೌಟುಂಬಿಕ ಜೀವನ ಅಸ್ತವ್ಯಸ್ತವಾಗುತ್ತದೆ ಎಂದರು.



ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಆಂಜನೇಯ ಮಾತನಾಡಿ, ಈಗಾಗಲೇ ಹೆಣ್ಣು ಸಂತಾನ ಕಡಿಮೆಯಾಗುತ್ತಿರುವುದರಿಂದ ಭ್ರೂಣ ಹತ್ಯೆ ತಡೆದು, "ಹೆಣ್ಣನ್ನು ರಕ್ಷಿಸಿ, ಹೆಣ್ಣನ್ನು ಓದಿಸಿ" ಎಂದರು.

ಸಭೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಕವಿತಾ, ಅಂಗನವಾಡಿ ಕಾರ್ಯಕರ್ತೆ ನೇತ್ರಾವತಿ, ಆಶಾ ಕಾರ್ಯಕರ್ತೆ ಮಮತಾ, ಗರ್ಭಿಣಿಯರು ಮತ್ತು ಸಾರ್ವಜನಿಕ ತಾಯಂದಿರು ಹಾಜರಿದ್ದರು.

## ಹಿಟ್ ಅಂಡ್ ರನ್ ಹೊಸ ಕಾಯ್ದೆ ರದ್ದತಿಗೆ ಆಗ್ರಹಿಸಿ ಲಾರಿ ಮುಷ್ಕರ



» ಚಿತ್ರದುರ್ಗ

ಕೇಂದ್ರ ಸರ್ಕಾರ ಹೊಸದಾಗಿ ಜಾರಿಗೆ ತಂದಿರುವ ಹಿಟ್ ಅಂಡ್ ರನ್ ಪ್ರಕರಣಗಳ ಸೆಕ್ಷನ್ 106/1, 106/2 ನ್ನು ರದ್ದುಪಡಿಸುವಂತೆ ಚಿತ್ರದುರ್ಗ ಗೂಡ್ ಷೆಡ್ ಮಾರ್ಕೆಟ್ ಲಾರಿ ಮಾಲೀಕರ ಸಂಘದಿಂದ ಎ.ಪಿ.ಎಂ.ಸಿ.ಯಲ್ಲಿ ಕಳೆದ ಮೂರು ದಿನಗಳಿಂದ ಮುಷ್ಕರ ನಡೆಸಲಾಗುತ್ತಿದೆ.

ಹಿಟ್ ಅಂಡ್ ರನ್ ಸೆಕ್ಷನ್ 106/1, 106/2 ರನ್ವಯ ಚಾಲಕರಿಗೆ 5 ರಿಂದ 10 ವರ್ಷ ಜೈಲು ವಾಸ ಮತ್ತು ಏಳು ಲಕ್ಷ ರೂ. ದಂಡ ವಿಧಿಸಲಾಗುವುದು. ಹಾಗಾಗಿ ಹೊಸದಾಗಿ ಜಾರಿಗೆ ತಂದಿರುವ ಸೆಕ್ಷನ್‌ನ್ನು ಕೇಂದ್ರ ಸರ್ಕಾರ ರದ್ದುಪಡಿಸಬೇಕೆಂದು ಒತ್ತಾಯಿಸಿ ಚಿತ್ರದುರ್ಗ ಗೂಡ್ ಷೆಡ್ ಮಾರ್ಕೆಟ್ ಮತ್ತು ಲಾರಿ ಮಾಲೀಕರು ಮುಷ್ಕರ ಕುಳಿತಿದ್ದಾರೆ.

ಕರ್ನಾಟಕ ರಾಜ್ಯ ಫೆಡರೇಷನ್ ಆಫ್ ಲಾರಿ ಮಾಲೀಕರ ಸಂಘ ಕರೆ ಕೊಟ್ಟಿರುವ ಮುಷ್ಕರದಲ್ಲಿ ಚಿತ್ರದುರ್ಗ ಲಾರಿ ಮಾಲೀಕರ ಸಂಘ, ಜಿಲ್ಲಾ ಸರಕು ಮತ್ತು ಅದಿರು ಲಾರಿ ಚಾಲಕರ ಸಂಘ, ಚಿತ್ರದುರ್ಗ ಕೋಟೆ ನಾಡು ಅಪ್ಪು ಟ್ಯಾಕ್ಸಿ ಚಾಲಕರ ಮತ್ತು ಮಾಲೀಕರ ಸಂಘ, ಜಿಲ್ಲಾ ಮಿನಿ ಲಾರಿ ಮಾಲೀಕರು ಮತ್ತು ಚಾಲಕರ ಸಂಘ ಹಾಗೂ ಹಿರಿಯೂರು ಲಾರಿ ಮಾಲೀಕರು ಮತ್ತು ಟ್ರಾನ್ಸ್‌ಪೋರ್ಟ್ ಏಜೆಂಟರ ಸಂಘದವರು ಮುಷ್ಕರದಲ್ಲಿ ಪಾಲ್ಗೊಂಡಿದ್ದಾರೆ.

ಚಿತ್ರದುರ್ಗ ಗೂಡ್ ಷೆಡ್ ಮತ್ತು ಮಾರ್ಕೆಟ್ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಮಹಮದ್ ಆಲಿ, ಉಪಾಧ್ಯಕ್ಷ ಭೀಮರಾಜ್, ಕಾರ್ಯದರ್ಶಿ ಏಜಾಜ್‌ಸಿಂಗ್, ನಿರ್ದೇಶಕ ಸುಹೇಲ್ ಅಹಮದ್, ವಿಶ್ವನಾಥ್, ಸಲೀಂಖಾನ್, ಸಾಧಿಕ್, ಶಫಿ, ವೆಂಕಟೇಶಪ್ಪ, ಕೇಶವ, ಮುಜ್ಜು ಇನ್ನು ಅನೇಕರು ಮುಷ್ಕರದಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್

# ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಗೆ ಒಳಗಾಗಬಾರದು

» ಚಿತ್ರದುರ್ಗ

ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಗೆ ಒಳಗಾಗಬಾರದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಶುಕ್ರವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ತಾಲ್ಲೂಕು ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಡ್ರಗ್ಸ್ ಸೇವನೆಯಿಂದಾಗುವ ದುಷ್ಪರಿಣಾಮಗಳು ಮತ್ತು ಎನ್.ಡಿ.ಪಿ.ಎಸ್ ಕಾಯ್ದೆ ಬಗ್ಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ, ಐಟಿಐ ವಿದ್ಯಾರ್ಥಿಗಳಿಂದ ಮಾದಕ ವಸ್ತುಗಳ ಸೇವನೆ ತ್ಯಜಿಸುವಂತೆ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಅವರು, ಭಾರತವು ಕೃಷಿ ಪ್ರಧಾನ ದೇಶವಾಗಿದ್ದು, ದೇಶದ ಅಭಿವೃದ್ಧಿಯಲ್ಲಿ ಕೈಗಾರಿಕೆಯ ಪಾತ್ರ ಮಹತ್ವದ ಆಗಿರುತ್ತದೆ.



ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಗೆ ಒಳಗಾಗಬಾರದು ಎಂದು ತಿಳಿಸಿದರು. ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಮಾತನಾಡಿ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ತಂಡವು ಜಿಲ್ಲೆಯಾದ್ಯಂತ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಯಾರು ಕೂಡ ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗಬಾರದು, ಮಾದಕ ವಸ್ತುಗಳ ಸೇವನೆಯಿಂದ ಹೊರಬರಲು ಚಿಕಿತ್ಸೆ ಉಂಟು. ಮನೋವೈದ್ಯರಿಂದ ಚಿಕಿತ್ಸೆ ಪಡೆಯಬಹುದು. 14416 ನಂಬರಿಗೆ ಉಚಿತ ಕರೆ ಮಾಡಿ ಆಪ್ತ ಸಮಲೋಚನೆ ಪಡೆಯಬಹುದು ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘ ಪ್ರಧಾನ ಕಾರ್ಯದರ್ಶಿ ಗಂಗಾಧರ್ ಮಾತನಾಡಿ, ದೇಶದಲ್ಲಿ 50ಕ್ಕಿಂತ ಹೆಚ್ಚು ಯುವಕರ ಸಂಖ್ಯೆ ಇದೆ. 18 ರಿಂದ 20 ವಯಸ್ಸಿನವರು ಹೆಚ್ಚಾಗಿ ಮಾದಕ ವಸ್ತುಗಳ ಸೇವನೆಗೆ ಒಳಗಾಗುತ್ತಿದ್ದು, ಇದನ್ನು ತಡೆಯಬೇಕು ಎಂದು ತಿಳಿಸಿದರು.ಮನೋವೈದ್ಯರು ಹಾಗೂ ಚಿಕ್ಕಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಆರ್.ಮಂಜುನಾಥ್ ಮಾತನಾಡಿ, ಮಾದಕ ವಸ್ತುಗಳಲ್ಲಿ ಮೆದುಳಿನಲ್ಲಿ ಕ್ಷಣಿಕ ಸುಖ ನೀಡುವ ಹಾರ್ಮೋನ್ ಅನ್ನು ಬಿಡುಗಡೆಗೊಳಿಸುವ ಹಾನಿಕಾರಕ ರಾಸಾಯನಿಕಗಳಿದ್ದು, ಇವುಗಳು ಮನುಷ್ಯನನ್ನು ಮಾದಕ ವಸ್ತುಗಳ ವ್ಯಸನಕ್ಕೆ ದಾಸನನ್ನಾಗಿ ಮಾಡಿಸುತ್ತವೆ. ಮಾದಕ ವಸ್ತುಗಳ ಸೇವನೆಯಿಂದ ಹಲವಾರು ದೈಹಿಕ ಮತ್ತು ಮಾನಸಿಕ ಕಾಯಿಲೆಗಳು ಬರುವುದರಿಂದ ಆರೋಗ್ಯದ ಹಿತದೃಷ್ಟಿಯಿಂದ ಮಾದಕ ವಸ್ತುಗಳಿಂದ ದೂರವಿರಲು ತಿಳಿಸಿದರು. ಉಪ ಪ್ರಧಾನ ಕಾನೂನು ನೆರವು ಅಭಿರಕ್ಷಕ ಎಂ.ಮೂರ್ತಿ ಅವರು ಎನ್‌ಡಿಪಿ ಎಸ್ ಕಾಯ್ದೆ ಕುರಿತು ವಿದ್ಯಾರ್ಥಿಗಳಿಗೆ ಸಂಕ್ಷಿಪ್ತವಾಗಿ ವಿವರಿಸಿದರು.ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲ ಬಿ.ಸುರೇಶ್ ಮಾತನಾಡಿ, ಮಾದಕ ವಸ್ತುಗಳ ಸೇವನೆ ಬಗ್ಗೆ ನಮ್ಮ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜಿಸಿದ್ದು, ವಿದ್ಯಾರ್ಥಿಗಳ ಹಿತ ದೃಷ್ಟಿಯಿಂದ ತುಂಬಾ ಉಪಯುಕ್ತವಾದ ಕಾರ್ಯಕ್ರಮ ಮಾದಕ ವಸ್ತುಗಳ ಬಗ್ಗೆ ಜಾಗರೂಕರಾಗಿರಲು ವಿದ್ಯಾರ್ಥಿಗಳಿಗೆ ಸೂಚಿಸಿದರು.ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಕಿರಿಯ ತರಬೇತಿ ಅಧಿಕಾರಿಗಳಾದ ಸತೀಶ್, ಆರ್.ತಿಮ್ಮಣ್ಣ,ಮಹಮದ್‌ಕಾಜಾಹುಸೇನ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮಂಜುನಾಥ್, ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪ್ರವೀಣ್, ವೈ. ತಿಪ್ಪೇಶ್. ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಕ್ಲಿನಿಕಲ್ ಸೈಕಾಲಜಿಸ್ಟ್ ಟಿ.ಶ್ರೀಧರ್ ಇದ್ದರು.

## ಫಾಸ್ಟ್ ನ್ಯೂಸ್

### ವಿಠಲನಗರದಲ್ಲಿ ವೈಶ್ಯವಾಟಿಕೆ ಪ್ರಚೋದನೆ: ಮಹಿಳೆ ಮೇಲೆ ಪ್ರಕರಣ

» ಚಳ್ಳಕೆರೆ

ನಗರದ ವಿಠಲನಗರದ ಕುಬೇರ ಗ್ಯಾಸ್ ಏಜೆನ್ಸಿ ಬಳಿ ಕಾನೂನು ಬಾಹಿರವಾಗಿ ವಾಸದ ಮನೆಯಲ್ಲೇ ವೈಶ್ಯವಾಟಿಕೆ ನಡೆಸುತ್ತಿದ್ದ ಮಹಿಳೆಯೊಬ್ಬಳ ಮೇಲೆ ದೂರು ದಾಖಲು ಮಾಡಲಾಗಿದೆ. ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ಈ ಬಗ್ಗೆ ಮಾಹಿತಿ ನೀಡಿ, ಖಚಿತ ವರ್ತಮಾನದ ಮೇರೆಗೆ ವಿಠಲನಗರದ ಲಕ್ಷ್ಮಣ ಎಂಬುವವರ ಮನೆ ಬಾಡಿಗೆ ಪಡೆದಿದ್ದ ಭಾರತಿ ಎಂಬ ಮಹಿಳೆ ಮನೆಯಲ್ಲೇ ಬೇರೆ, ಬೇರೆ ಕಡೆಯಿಂದ ಮಹಿಳೆಯರನ್ನು ಕರೆಸಿ ಪರಪುರಷರೊಂದಿಗೆ ವೈಶ್ಯವಾಟಿಕೆ ನಡೆಸುತ್ತಿದ್ದು, ಆಕೆಯ ಮೇಲೆ ಪಿಎಸ್ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿದ್ದಾರೆ.

### ಕೃಷ್ಣಮೃಗ ಮತ್ತು ಮೊಲದ ಚರ್ಮ ಸಂಗ್ರಹಸಿದ್ದ ವ್ಯಕ್ತಿಯ ಬಂಧನ



» ಚಳ್ಳಕೆರೆ

ತಾಲ್ಲೂಕಿನ ಜಾಜೂರು ಗ್ರಾಮದ ತೋಟದ ಮನೆಯೊಂದರಲ್ಲಿ ಅರಣ್ಯ ಇಲಾಖೆಯ ಕಾನೂನನ್ನು ವಿರೋಧಿಸಿ ಅದೇ ಗ್ರಾಮದ ಓಬಣ್ಣ(55) ಎಂಬ ವ್ಯಕ್ತಿ ಕೃಷ್ಣಮೃಗ ಹಾಗೂ ಕಾಡುಮೊಲದ ಚರ್ಮವನ್ನು ಮಾರಾಟ ಮಾಡುವ ಉದ್ದೇಶದಿಂದ ಮನೆಯಲ್ಲಿಟ್ಟಿದ್ದು, ಈ ಬಗ್ಗೆ ಮಾಹಿತಿ ಪಡೆದ ಅರಣ್ಯ ಇಲಾಖೆ ಅಧಿಕಾರಿಗಳು ಗ್ರಾಮಕ್ಕೆ ತೆರಳಿ ಆರೋಪಿಯನ್ನು ವಶಕ್ಕೆ ಪಡೆದು ಪ್ರಾಣಿಗಳ ಚರ್ಮವನ್ನು ವಶಪಡಿಸಿಕೊಂಡಿದ್ದಾರೆ. ಅರಣ್ಯ ಅಧಿಕಾರಿ ಬಹುಗುಣ ಮತ್ತು ತಂಡ ಆರೋಪಿ ಓಬಣ್ಣನನ್ನು ಚಳ್ಳಕೆರೆ ಕಚೇರಿಗೆ ಕರೆತಂದು ಅವನ ವಿರುದ್ದ ಪ್ರಕರಣ ದಾಖಲಿಸಿ ಬಂಧಿಸಿದ್ದಾರೆ.

### ವ್ಯಕ್ತಿ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ಡಿಎಆರ್ ಮುಖ್ಯಪೇದೆಯಾಗಿ ಕಾರ್ಯನಿರ್ವಹಿಸುತ್ತಿದ್ದ ಎಂ.ಎನ್.ಜಗದೀಶ್ (48) ಎಂಬ ವ್ಯಕ್ತಿಯು 2024ರ ಜನವರಿ 4ರಂದು ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಎಂ.ಎನ್. ಜಗದೀಶ್, 48 ವರ್ಷ, ಸುಮಾರು 5 3/4 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ದೃಢವಾದ ಮೈಕಟ್ಟು ಹೊಂದಿರುತ್ತಾರೆ. ಕನ್ನಡ ಮತ್ತು ತೆಲಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಹಸಿರು ಬಣ್ಣದ ಟಿ.ಶರ್ಟ್,ಕಪ್ಪು ಬಣ್ಣದ ಜಿನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿತ್ರದುರ್ಗ ನಗರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ನಗರ ಠಾಣೆ ಠಾಣಾಧಿಕಾರಿಗಳು ತಿಳಿಸಿದ್ದಾರೆ.

### ಬೆಂಬಲ ಬೆಲೆಯಡಿ ಕೊಬ್ಬರಿ ಖರೀದಿ: ಜ.20 ರಿಂದ ನೊಂದಣಿ ಆರಂಭ

» ಚಿತ್ರದುರ್ಗ

ನ್ಯಾಫೆಡ್ ಸಂಸ್ಥೆಯ ಪರವಾಗಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತದಿಂದ 2024ನೇ ಸಾಲಿಗೆ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಉಂಡೆಕೊಬ್ಬರಿಯನ್ನು ಖರೀದಿಸಲು ಇದೇ ಜನವರಿ 20 ರಿಂದ ರೈತರ ನೊಂದಣಿ ಪ್ರಾರಂಭ ಮಾಡಲಾಗುವುದು. ಸರ್ಕಾರದ ನಿರ್ದೇಶನದಂತೆ ಪ್ರತಿ ಕ್ವಿಂಟಾಲ್‌ಗೆ ರೂ.12000/–ಗಳನ್ನು ನಿಗದಿಪಡಿಸಲಾಗಿದೆ. ನೊಂದಣಿಗೆ 45 ದಿನಗಳ ಕಾಲವಕಾಶವಿದ್ದು, 3 ತಿಂಗಳ ವರೆಗೆ ಕೊಬ್ಬರಿ ಖರೀದಿ ಮಾಡಲಾಗುವುದು. ಪ್ರತಿ ರೈತರಿಗೆ 6 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ಉಂಡೆ ಕೊಬ್ಬರಿಯನ್ನು ಖರೀದಿ ಮಾಡಲು ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ತೀರ್ಮಾನಿಸಿದೆ. ಚಿತ್ರದುರ್ಗ, ಹಿರಿಯೂರು ಹಾಗೂ ಹೊಸದುರ್ಗ ಎ.ಪಿ.ಎಂ.ಸಿಗಳಲ್ಲಿ ರೈತರು ಆಧಾರ್ ಕಾರ್ಡ್ ಮತ್ತು ಎಫ್.ಐ.ಡಿ ಕಾರ್ಡ್‌ಗಳೊಂದಿಗೆ ಬಯೋಮೆಟ್ರಿಕ್ ಮೂಲಕ ನೊಂದಣಿ ಮಾಡಿಕೊಳ್ಳಬಹುದು. ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಅವರ ಸೂಚನೆಯಂತೆ ಹೊಸದುರ್ಗ ಎ.ಪಿ.ಎಂ.ಸಿ ಆವರಣದಲ್ಲಿ ಎರಡು ಹಾಗೂ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ನಿರ್ದೇಶನದಂತೆ ಚಿತ್ರದುರ್ಗ ಎ.ಪಿ.ಎಂ.ಸಿಯಲ್ಲಿ ಈ ಬಾರಿ ಹೊಸದಾಗಿ ಕೊಬ್ಬರಿ ಖರೀದಿ ಕೇಂದ್ರ ತೆರೆಯಲಾಗಿದೆ. ಇದರೊಂದಿಗೆ ಹಿರಿಯೂರಿನ ಎ.ಪಿ.ಎಂ.ಸಿಯಲ್ಲೂ ಕೊಬ್ಬರಿ ಖರೀದಿ ಕೇಂದ್ರ ಕಾರ್ಯನಿರ್ವಹಿಸಲಿದೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ನಿಯಮಿತ ಚಿತ್ರದುರ್ಗ ಶಾಖಾ ವ್ಯವಸ್ಥಾಪಕ ಬಸವೇಶ ಎಸ್. ನಾಡಿಗರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರೂಪದ ಶ್ರವಣಕುಮಾರನ ಸನ್ನಿಧಿ

# ಶ್ರೀ ದಶರಥರಾಮೇಶ್ವರ ಕ್ಷೇತ್ರ

### ವನವಾಸದ ಸಂಧರ್ಬದಲ್ಲಿ ಶ್ರೀ ರಾಮದೇವರು ತಂದೆ ಸ್ಥಾಪಿಸಿದ್ದ ಶಿವಲಿಂಗವನ್ನು ಪೂಜಿಸಲ್ಪಟ್ಟಿದ್ದರು

» ನಾಗತಿಹಳ್ಳಿಮಂಜುನಾಥ್

» ಹೊಸದುರ್ಗ

ಗಂಡು ಮೆಟ್ಟಿದ ನಾಡಿದ ನಾಡು ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲ್ಲೂಕು ಮತ್ತೋಡು ಹೋಬಳಿ ಗುಡ್ಡದನೇರಲಕೆರೆಯ ಪೂರ್ವಕ್ಕಿರುವ ಪರ್ವತದಂತಹ ಬೆಟ್ಟದ ಸಾಲಿನಲ್ಲಿ ರಾರಾಜಿಸುತ್ತಿರುವ ಕ್ಷೇತ್ರವೇ ದಶರಥರಾಮೇಶ್ವರನ ಸನ್ನಿಧಾನವಾಗಿದೆ.

ಪ್ರಕೃತಿ ರಮಣೀಯವಾದ ಪರಿಸರದಲ್ಲಿರುವ ಕ್ಷೇತ್ರದ ಸುತ್ತ ಬೆಟ್ಟಗುಡ್ಡಗಳ ಸಾಲು ಕಂಗೊಳಿಸುವ ಮರಗಿಡಗಳ ಆಹ್ಲಾದಕರ ತಂಗಾಳಿ ವನ್ಯ ಪ್ರಾಣಿಗಳ ಓಡಾಟ ಕ್ಷೇತ್ರಕ್ಕೆ ಮೆರುಗು ನೀಡಿದೆ. ಸುಂದರ ಆಕರ್ಷಣೀಯ ತಾಣವಾಗಿ ಕಂಗೊಳಿಸುತ್ತಿರುವ ಭಕ್ತರನ್ನು ತನ್ನೆಡೆಗೆ ಕೈಬೀಸಿ ಕರೆಯುತ್ತಿರುವ ಈ ಕ್ಷೇತ್ರಕ್ಕೆ ಶ್ರೀ ದಶರಥರಾಮೇಶ್ವರ ಪುಣ್ಯ ತ್ರೀಕೋಟಿ ಪರ್ವತಗಳ ಸಂಗಮ ಕ್ಷೇತ್ರವಾಗಿದೆ. ವನಸಿರಿಯ ಮಡಿಲಿನಲ್ಲಿ ದೈವ ಭಕ್ತರಿಗೆ ಧಾರ್ಮಿಕ ಆರಾಧಕರಿಗೆ ಸಾಧು ಸತ್ಪುರಷರಿಗೆ ಇದು ಅನನ್ಯ ತಪೋ ಭೂಮಿಯಾಗಿದೆ.

ತ್ರೇತಾಯುಗದಿಂದಲೂ ಧಾರ್ಮಿಕವಾಗಿ ಜನರ ಮನಸ್ಸನ್ನು ಸೆಳೆಯುತ್ತಿರುವ ಅದ್ಭುತ ಪುಣ್ಯಕ್ಷೇತ್ರವಾದ ಇದನ್ನು ದೊಡ್ಡ ವಜ್ರ ಎಂದು ಇಂದಿಗೂ ಕರೆಯಲಾಗುತ್ತಿದೆ. ಈ ಸನ್ನಿಧಾನಕ್ಕೆ ತನ್ನದೇ ಆದ ಪೌರಾಣಿಕ ಮತ್ತು ಐತಿಹಾಸಿಕ ಇತಿಹಾಸವಿದೆ. ತ್ರೇತಾಯುಗದಲ್ಲಿ ಅಯೋಧ್ಯೆಯ ಅರಸುಗಳಾದ ಶ್ರೀ ದಶರಥ ಮಹರಾಜ ತನ್ನ ಬೇಟೆಗಾಗಿ ಅನೇಕ ಅರಣ್ಯ ಪ್ರದೇಶಗಳನ್ನು ಸುತ್ತಾಡುತ್ತಾ ಈ ವಜ್ರಗಿರಿಯ ಘೋರ ಅರಣ್ಯಕ್ಕೆ ಬಂದು ಬೀಡು ಬಿಟ್ಟರು.

ಈ ಗಿರಿಯ ಸರೋವರಕ್ಕೆ ನೀರಿಗಾಗಿ ಬಳಲಿ ಬರುವ ವನ್ಯ ಮೃಗಗಳನ್ನು ಕಂಡು ಚಕಿತರಾದ ದಶರಥ ಮಹಾರಾಜರು ಮರಗಿಡಗಳ ಪೊದೆ ಪೊಟರುಗಳಲ್ಲಿ ಬೇಟೆಗಾಗಿ ಕಾದು ಕುಳಿತಿರಲು ಇತ್ತ ಓರ್ವ ಋಷಿಕುಮಾರನಾದ ಶ್ರವಣಕುಮಾರನು ತನ್ನ ಮಾತಾಪಿತೃಗಳ ಅದೇಶದಂತೆ ಕುರುಡ ತಂದೆ ತಾಯಿಗಳನ್ನು ಅಡ್ಡೆಯಲ್ಲಿ ಹೆಗಲ ಮೇಲೆ ಹೊತ್ತು ದಕ್ಷಿಣ ಭಾರತದ ತೀರ್ಥಕ್ಷೇತ್ರಗಳ ಯಾತ್ರೆ ಮುಗಿಸಿ ಕಣಿವೆಯತ್ತ ಸಾಗುತ್ತಿದ್ದ.

ಈ ರೀತಿ ಹೊರಟ ಶ್ರವಣಕುಮಾರ ಇದೇ ಮಾರ್ಗದಲ್ಲಿ ಸಾಗುತ್ತಿರುವಾಗ ಬಿಸಿಲಿನ ತಾಪಕ್ಕೆ ತನ್ನ ತಂದೆ ತಾಯಿಗಳಿಗೆ ನೀರಡಿಕೆಯಾಗಲು ತಾನು ಹೊತ್ತ ಅಡ್ಡೆಯನ್ನು ಮರವೊಂದರ ನೆರಳಿನಲ್ಲಿ ಇಳಿಸಿ ಶ್ರವಣಕುಮಾರನು ನೀರನ್ನು ತರಲು ಸರೋವರಕ್ಕೆ ತೆರಳಿದನು. ಆತನು ಸರೋವರದಲ್ಲಿ ತನ್ನ ಕಮಂಡಳದಿಂದ ನೀರು ತುಂಬುತ್ತಿರುವಾಗ ಗುಳಗುಳನೆ ಶಬ್ದವಾಯಿತು ಇತ್ತ ಬೇಟೆಗಾಗಿ ಕಾದು ಕುಳಿತಿದ್ದ ದಶರಥನು ನೀರಿನ ಶಬ್ದವನ್ನು ಆಲಿಸಿ ಯಾವುದೋ ಪ್ರಾಣಿ ನೀರು ಕುಡಿಯುತ್ತಿರಬಹುದೆಂದು ಭ್ರಮಿಸಿ ತನ್ನ ಶಬ್ದವೇದಿ ವಿದ್ಯೆಯಿಂದ ಬಾಣ ಪ್ರಯೋಗ ಮಾಡಲು ಬಿಟ್ಟ ಬಾಣ ಶ್ರವಣನ ಎದೆಗೆ ನಾಟಿ ಅಯ್ಯೋ ಎಂದು ಕೂಗಿ ಪ್ರಾಣ ಬಿಟ್ಟನು.

ಸರೋವರದತ್ತ ಮಹಾರಾಜನು ಬಂದು ನೋಡಿದಾಗ ದುರಂತ ಮನನವಾಗಿ ಪರಿಪರಿಯಾಗಿ ಪರಿತಪಿಸುತ್ತ ಋಷಿವರ್ಯರ ಬಳಿಗೆ ನಿಜ ಸಂಗತಿಯನ್ನು ನಿವೇದಿಸಿದನು.

ವಿವರ ತಿಳಿದ ಶೋಕತಪ್ತ ತಂದೆ ತಾಯಿಗಳು ರಾಜನಿಗೆ ಶಾಪ ಹಾಕಿ ಸ್ಥಳದಲ್ಲಿಯೇ ಅಸುನೀಗಿದರು ಆಗ ರಾಜನು ಶಾಪವಿಮೋಚನೆಗಾಗಿ ಗಿರಿಯ ಗುಹೆಯಲ್ಲಿ ಶಿವಲಿಂಗವನ್ನು ಪ್ರತಿಷ್ಠಾಪಿಸಿ ಶಾಪ ವಿಮುಕ್ತಿಯಾದನೆಂದು ಪ್ರತೀತಿ



ಇದೆ. ಅದೇ ರೀತಿ ಸಂತಾನವಿಲ್ಲದೆ ವಿಚಲಿತನಾಗಿದ್ದ ರಾಜನು ಇಲ್ಲಿ ಪುತ್ರ ಸಂತಾನಕ್ಕಾಗಿ ಪುತ್ರಕಾಮೇಷ್ಠಿಯಾಗವನ್ನು ಮಾಡಿ ಪುತ್ರ ಭಾಗ್ಯವನ್ನು ಪಡೆದನು.

ಇಂದಿಗೂ ಈ ಕ್ಷೇತ್ರದಲ್ಲಿ ದಶರಥ ಮಹಾರಾಜನು ಪ್ರತಿಷಾಪಿಸಿದ ಶಿವಲಿಂಗವಿದ್ದು ಮತ್ತು ಶ್ರವಣಕುಮಾರ ಆತನ ತಂದೆ ತಾಯಿಗಳ ಸಮಾಧಿಗಳಿವೆ ಹಾಗೂ ದಶರಥ ಮಂಟಪವನ್ನೂ ನೋಡಬಹುದಾಗಿದೆ.

ಮುಂದೆ ವನವಾಸದ ಸಂಧರ್ಬದಲ್ಲಿ ಶ್ರೀ ರಾಮದೇವರು ತಂದೆ ಸ್ಥಾಪಿಸಿದ್ದ ಈ ಶಿವಲಿಂಗವನ್ನು ಪೂಜಿಸಲ್ಪಟ್ಟರೆಂದೂ ಶ್ರೀ ರಾಮರ ಭಕ್ತಿಯಿಂದ ಸಂತೃಪ್ತನಾದ ಪರಶಿವನು ಅವರಿಗೆ ಇಲ್ಲಿ ಪ್ರತ್ಯಕ್ಷನಾದನೆಂದೂ ಅದ್ದರಿಂದಲೇ ಇದಕ್ಕೆ ಶ್ರೀ ದಶರಥರಾಮೇಶ್ವರನ ಮಹಾಕ್ಷೇತ್ರ ಎಂದು ಹೆಸರಸು ಬಂದಿರುವುದಾಗಿ ಪೂರ್ವಿಜರು ಪ್ರತಿಪಾದಿಸಿದ್ದಾರೆ. ಅದೇ ರೀತಿ ಈ ಕ್ಷೇತ್ರದ ಇತಿಹಾಸವನ್ನು ಸಾರುವ ಹಲವು ಹತ್ತು ಶಿಲಾಶಾಸನಗಳೂ ಕಾನುಬೇನೆಹಳ್ಳಿ ಶಬರಿವನ ಮುಂತಾದ ಕಡೆಗಳಲ್ಲಿ ಇಂದಿಗೂ ಕಾಣಬಹುದಾಗಿದೆ

ಶ್ರವಣ ಪರ್ವತ:ಶ್ರೀ ರಾಮೇಶ್ವರನ ಗುಹೆಯ ಮುಂಭಾಗಕ್ಕಿರುವ ಈ ಬೃಹತ್ ಪರ್ವತವು ಶ್ರವಣ ಎನ್ನುತ್ತಾರೆ. ಶ್ರವಣನ ಎದೆಗೆ ಬಿಟ್ಟ ಬಾಣ ತಾಕಿದಾಗ ಚಿಮ್ಮಿದ ರಕ್ತದ ಸಂಕೇತವಾಗಿ ಈ ಪರ್ವತದಲ್ಲಿ ಇಂದಿಗೂ ಕುರುಹುಗಳನ್ನು ನೋಡಬಹುದು.

ಈ ಪರ್ವತವು ವಿಶಿಷ್ಟ ರೀತಿಯ ವಿನ್ಯಾಸಗಳಿಂದ ರೂಪುಗೊಂಡಿದ್ದು ಶಿಲ್ಪಿಯು ಕೆತ್ತಿದ ಕಲಾಕೃತಿಗಳಂತೆ ಕಾಣುವ ಹಲವು ಚಿತ್ರಣಗಳನ್ನು ನೋಡಬಹುದಾಗಿದೆ ನೋಡುಗರು ತಮ್ಮ ಕಲ್ಪನೆಯ ಬಾವನೆಗಳಂತೆ ಮನಸ್ಸಿನಲ್ಲಿ ಕಲಾಕೃತಿಗಳನ್ನು ಮೂಡಿ ಬರುತ್ತವೆ. ಪ್ರಕೃತಿಯ ಸೃಷ್ಟಿಯಲ್ಲಿ ಮೂಡಿಬಂದ ಕಲಾಕೃತಿಗಳು ನೋಡಲು ತುಂಬ ವಿಷ್ಮಯವಾಗಿ ಕಾಣಬಹುದಾಗಿದೆ.

ಗಂಗಾ ಪುಷ್ಕರಣಿಗಳು:ಶ್ರವಣ ಪರ್ವತ ಕೆಳಭಾಗದಲ್ಲೊಂದು ಮತ್ತು ಮೇಲ್ಭಾಗದಲ್ಲೊಂದು ಗಂಗಾ ಪುಷ್ಕರಣಗಳಿದ್ದು ಮೇಲಿನದನ್ನು ಆಕಾಶಗಂಗೆ ಎಂದೂ ಕೆಳಗಿನದನ್ನು ಪಾತಾಳಗಂಗೆ ಎಂದೂ ಕರೆಯುತ್ತಾರೆ. ಈ ಗಂಗೆಯಲ್ಲಿ ಯುಗಯುಗಳಿಂದಲೂ ಸಿದ್ದಿ ಪುರುಷರು ಯತಿಮುನಿಗಳು ಸಾಧು ಸಂತರು ಋಷಿ ಪುಂಗವರು ತಪೋಯೋಗಿಗಳು ಗಣಾಧೀಶರು ದಾಸ ಶರಣರು ಈ ಪರಮ ಪವಿತ್ರ ಪಾವನ ಗಂಗೆಯಲ್ಲಿ ಮಿಂದು ತಪಸ್ನಾನ್ನಾದದರಿಸಿದ ಪುಣ್ಯಧಾಮವಾಗಿದೆ. ಈಗಲೂ ಇಲ್ಲಿನ ಗಂಗಾಸ್ನಾನಕ್ಕೆ ದೇವರುಗಳು ಬರುವ ವಾಡಿಕೆ ನಡೆದು ಬಂದಿದೆ. ಭಕ್ತರು ದೂರದ ಊರುಗಳಿಂದ ಇಲ್ಲಿಗೆ ಗಂಗಾ ಸ್ನಾನಕ್ಕೆ ಬರುತ್ತಾರೆ.

ಶ್ರೀ ರಾಮೇಶ್ವರ ಗುಹೆ:ಶ್ರೀ ರಾಮೇಶ್ವರನು ನೆಲೆಸಿರುವ ಗುಹೆಯಲ್ಲಿ ಎರಡು ಸುರಂಗಗಳಂತೆ ಈ ಪೈಕಿ ಒಂದು ಸುರಂಗದಲ್ಲಿ ಬಂಗಾರ ಗಿರಿಯಲ್ಲಿ ನೆಲೆಸಿರುವ ಹೊನ್ನಿನ ವರದರಾಜನಿಗೆ ಅಭಯ ನೀಡಿದ್ದು ಇನ್ನೊಂದು ಸುರಂಗದಲ್ಲಿ ಕೆಂಕೆರೆಪುರ ಮಠದ ಶ್ರೀ ತಪೋಯೋಗಿ ಚನ್ನ ಬಸವೇಶ್ವರರಿಗೆ ಶ್ರೀ ದಶರಥರಾಮೇಶ್ವರ ಸ್ವಾಮಿಜಿಯು ದುರುಣನ ನೀಡಿದರೆಂಬ ಪ್ರತೀತಿ.

ವಿಶಿಷ್ಟ ಹರಕೆಗಳು:ಇಲ್ಲಿಗೆ ಬರುವ ಭಕ್ತರು ದೇವರಿಗೆ ಹೋಳಿಗೆ ತುಪ್ಪದ ಆರಾಧನೆಯೇ ವಿಶಿಷ್ಟ ಹರಕೆಯಾಗಿದ್ದು ಇಂದಿಗೂ ವರ್ಷವಿಡಿ ಬರುವ ಯಾತ್ರಿಕರು ಈ ರೀತಿ ಹರಕೆ ಒಪ್ಪಿಸುತ್ತಾರೆ.

ವಾನರ ದಂಡು:ಸೌಂದರ್ಯ ರಮಣೀಯ ರಮ್ಯ ತಾಣವಾದ ಈ ಕಾನನದಲ್ಲಿ ಸದಾಕಾಲವೂ ಕುಣಿದುಕುಪ್ಪಳಿಸುವ ವಾನರ ಸೇನೆಗೆ ಪರಮಭಕ್ತಿ ಸಮರ್ಪಣೆಯಾಗುತ್ತದೆ. ದೇವರಿಗೆ ಮುಂಚೆ ಇಲ್ಲಿ ವಾನರರಿಗೆ ಎಡೆ ಸೇವೆಯಾಗುತ್ತದೆ. ಈ ರೀತಿ ಮಾಡುವುದು ಮೂಲ ದೇವರಿಗೆ ಅತ್ಯಂತ ಪ್ರಿಯವಾದ ಸಂಗತಿ ಈಗಲೂ ಇಲ್ಲಿ ವನ್ಯ ಮೃಗಳಿವೆ.

ಇಲ್ಲಿನ ಶ್ರೀ ವೀರಭದ್ರಸ್ವಾಮಿ ದೇವಾಲಯದಲ್ಲಿ ಪ್ರತಿ ವರ್ಷ ಕೆಂಡಾರ್ಚನೆ ಜರುಗುವುದು 800 ವರ್ಷಗಳ ಹಿಂದಿನ ಕಲ್ಲಿನ ರಥ ಮನಮೋಹಕವಾಗಿದೆ. ಶ್ರೀ ದಶರಥರಾಮೇಶ್ವರನ ಮುಂದೆ ಪಂಚನದಿಗಳನ್ನು ಸ್ಥಾಪಿತವಾಗಿವೆ. ಮೂಲ ವಿಗ್ರಹದ ಪಕ್ಕದಲ್ಲಿಯೇ ಉದ್ಭವ ಲಿಂಗವಿದೆ ಸ್ವಾಮಿಯವರ ಉತ್ಸವ ಮೂರ್ತಿ ದೇವಾಲಯವು ಗುಡ್ಡದ ನೇರಲಕೆರೆಯಲ್ಲಿದೆ.

## ಭಾವಭಕ್ತಿಯಲ್ಲಿ ಮಿಂದೆದ್ದ ಭಜನೆ ಕಲಾವಿದರು

### ಭೀಮಸಮುದ್ರದಲ್ಲಿ 3 ನೇ ವರ್ಷದ ಭಜನಾ ಕಮ್ಮಟ – 23 ಭಜನಾ ತಂಡಗಳು ಭಾಗಿ, ಸಂಗೀತದ ರಸಧಾರೆ

» ಭರಮಸಾಗರ

ಭೀಮಸಮುದ್ರದ ಉತ್ಸವಾಂಭ ಸೇವಾ ಸಮಿತಿ, ತುರೇಬೈಲು ಪಾಂಡುರಂಗ ಭಜನಾ ಮಂಡಳಿಯಿಂದ 3ನೇ ವರ್ಷದ ಶ್ರೀ ಪಾಂಡುರಂಗಸ್ವಾಮಿ ವಾರ್ಷಿಕೋತ್ಸವ, ಪೂಜಾ ಕಾರ್ಯಕ್ರಮ, ಸಂಕ್ರಾಂತಿ ಸಂಭ್ರಮ ಹಾಗೂ ಭಜನಾ ಕಮ್ಮಟ ಕಾರ್ಯಕ್ರಮವನ್ನು ತುರೇಬೈಲು ಶ್ರೀ ರೇಣುಕ ಯಲ್ಲಮ್ಮ ದೇವಸ್ಥಾನದ ಆವರಣದಲ್ಲಿ ನಡೆಯಿತು.

ಭಜನಾ ಕಮ್ಮಟ ಆರಂಭಕ್ಕೆ ಮೊದಲು ಪಾಂಡುರಂಗಸ್ವಾಮಿ, ರೇಣುಕಾ ಯಲ್ಲಮ್ಮ ಮತ್ತು ಮರುಡಾಂಭಿಕಾ ದೇವಿಯ ಪೂಜೆ ಹಾಗೂ ಮಹಾಮಂಗಳಾರತಿ ಕಾರ್ಯಕ್ರಮ ನಡೆಯಿತು.

ಗಿಲ್ಕೆನಹಳ್ಳಿ ಶ್ರೀ ಲಕ್ಷೀ ರಂಗನಾಥ್, ಚಿತ್ರಳ್ಳಿ ಶ್ರೀ ಗುರು ತಮ್ಮಜ್ಜರ ,ನಲ್ಲಿಕಟ್ಟೆ ಶ್ರೀ ಪಾಂಡುರಂಗ, ವಿ.ಪಾಳ್ಯ ಪಾಂಡುರಂಗ, ಕಡ್ಲೇಗುದ್ದು ಶ್ರೀ ಆಂಜನೇಯ ಸ್ವಾಮಿ, ಚಿಕ್ಕನಹಳ್ಳಿ ಶ್ರೀ ಆಂಜನೇಯ, ಚಿಕ್ಕನಹಳ್ಳಿ ಉಚ್ಚಂಗಿ ಯಲ್ಲಮ್ಮ, ಪಳಿಕೇ ಹಳ್ಳಿ ಶ್ರೀ ಶಿವ, ಮದಕರಿಪುರ ಪಾಂಡುರಂಗ ಸಂತ, ಅಳಗವಾಡಿ ಕಣಿವೆ ಮಾರಮ್ಮ, ಬೊಮ್ಮೇನಹಳ್ಳಿ, ಹಿರೇಗುಂಟನೂರು ಶ್ರೀ ಗುರುಶಾಂತ, ತಿರುಮಲಾಪುರ, ಬೆಟ್ಟದ ನಾಗೇನಹಳ್ಳಿ ಶ್ರೀ



ಪಾಂಡುರಂಗ, ಉಪ್ಪನಾಯಕನಹಳ್ಳಿ ಶ್ರೀ ಮಾರುತಿ, ಗೌನಹಳ್ಳಿ ಮೈಲಾರಲಿಂಗೇಶ್ವರ, ಬಾಲನಹಳ್ಳಿ ಶ್ರೀ ಚಿತ್ರಲಿಂಗೇಶ್ವರ, ಹಿರೇಗುಂಟನೂರು ಶ್ರೀ ದುರ್ಗಾಂಬಿಕಾ ಹುಚ್ಚವ್ವನಹಳ್ಳಿ ಶ್ರೀ ಸಿದ್ಧಾರೂಢಸ್ವಾಮಿ, ಕೊಳಹಾಳು ಶ್ರೀ ಕುಕ್ಕವಾಡೇಶ್ವರಿ, ನಿಂಗಾವರಹಟ್ಟಿ ಶ್ರೀ ಪಾತಲಿಂಗೇಶ್ವರ, ಸೂರೇನಹಳ್ಳಿ ಗೊಲ್ಲರಹಟ್ಟಿ ಶ್ರೀ ಕರಿಬಸವೇಶ್ವರ ಹೀಗೆ ಒಟ್ಟು 23 ಭಜನಾ ತಂಡದ ಕಲಾವಿದರು ಪಾಲ್ಗೊಂಡಿದ್ದರು. ರಾತ್ರಿಯಿಡಿ 3 ಸುತ್ತುಗಳಲ್ಲಿ ಬುಧವಾರ ನಸುಕಿನವರೆಗೆ ನಡೆಯಿತು. ಭಜನೆಯು ಭಾವ, ಭಕ್ತಿಪೂರ್ಣವಾಗಿತ್ತು ಜಾನಪದ, ಭಕ್ತಿಗೀತೆಗಳು ಮೇಳೈಸಿದವು, ಸಂಗೀತದ ರಸಧಾರೆಗೆ ಜನತೆ ತಲೆದೂಗಿದರು. ಎಲ್ಲಾ ತಂಡಗಳಿಗೂ ಸನ್ಮಾನಿಸಲಾಯಿತು.ಬಿಜೆಪಿ ಯುವ ಮುಖಂಡ ಜಿ.ಎಸ್.ಅನಿತ್ ಕುಮಾರ್, ಬಿ.ಟಿ.ವೀರೇಶ್, ಟಿ.ಜಿ.ಮಲ್ಲಿಕಾರ್ಜುನ್, ಟಿ.ಜಿ.ಅರುಣಕುಮಾರ್, ಬಿ.ಎಸ್. ಶರತ್ ಪಟೇಲ್, ಪ್ರಶಾಂತ್ ಕುಮಾರ್, ಲೆಕ್ಕಪರಿಶೋಧಕವೆಂಕಟೇಶಪ್ಪ,ವಿಠಲ್‌ಕುಮಾರ್, ಶಂಕರಮೂರ್ತಿ, ಪೂಜಾರಿ ಮಂಜಪ್ಪ, ಶಿಕ್ಷಕ ಜೆ.ರಾಜು, ಸುಬ್ಬಣ್ಣ, ಹನುಮಂತಪ್ಪ, ಬನಶಂಕರಿ ರಾಜಪ್ಪ, ಲಾರಿ ರಾಜಪ್ಪ ಉಪಸ್ಥಿತರಿದ್ದರು.

## ಪ್ರವಾಸಿ ಮಂದಿರದ ಪಕ್ಕದಲ್ಲಿ ಶೌಚಾಲಯ ತೆರೆಯುವಂತೆ ಮನವಿ



» ಚಿತ್ರದುರ್ಗ

ನಗರದ ಮುಖ್ಯ ರಸ್ತೆ, ಪ್ರವಾಸಿ ಮಂದಿರದ ಪಕ್ಕದಲ್ಲಿ ನಿರ್ಮಿಸಿರುವ ವಾಣಿಜ್ಯ ಮಳಿಗೆಯಲ್ಲಿ ಶೌಚಾಲಯ ಇದ್ದು, ಇಲ್ಲದಂತಾಗಿರುವುದು ಮಳಿಗೆಯಲ್ಲಿ ವ್ಯಾಪಾರ ನಡೆಸುತ್ತಿರುವ ಮಹಿಳೆಯರಿಗೆ ಅತೀವ ತೊಂದರೆಯಾಗಿದೆ ಎಂದು ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ಮತ್ತು ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಯುಕ್ತ ಸಂಘಟನೆಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧೀಕ್ಷಕ ಪ್ರಮೋದ್‌ರವರಿಗೆ ಶುಕ್ರವಾರ ಮನವಿ ಸಲ್ಲಿಸಲಾಯಿತು. ವಾಣಿಜ್ಯ ಸಂಕೀರ್ಣದಲ್ಲಿ ಶೌಚಾಲಯವಿದ್ದು, ಇಲ್ಲದಂತಾಗಿರುವುದನ್ನು ನೋಡಿದರೆ ಸರ್ಕಾರದ ಹಣ ಹೇಗೆ ಪೋಲಾಗುತ್ತಿದೆ ಎನ್ನುವುದಕ್ಕೆ ಸ್ಪಷ್ಟ ನಿದರ್ಶನ. ಈಗಲಾದರೂ ಇಲ್ಲಿ ಶೌಚಾಲಯವನ್ನು ತೆರೆದು ಮಹಿಳೆಯರ ಪ್ರಕೃತಿ ಕರೆಗೆ ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದಾರೆ.

## ಪ್ರಮುಖ ಸುದ್ದಿ

# ಸಮಾಜ ಸುಧಾರಣೆ ತರಲು ವೇಮನರ ವಚನ ಸಹಕಾರಿ

» ಚಳ್ಳಕೆರೆ

ಸಮಾಜದ ಮೇಲೆ ಧಾರ್ಮಿಕ ಶಕ್ತಿ ಮೂಲಕ ಬೆಳಕು ನೀಡಿದ ಅನೇಕ ದಾರ್ಶನಿಕರು ತಮ್ಮದೇಯಾದ ಕೊಡುಗೆಯನ್ನು ನೀಡುವ ಮೂಲಕ ಜನಮಾನಸದಲ್ಲಿ ಶಾಶ್ವತವಾಗಿ ಉಳಿದಿದ್ದಾರೆ. ಯೋಗಿ ವೇಮನರವರು ರಚನೆ ಮಾಡಿದ ಪ್ರತಿಯೊಂದು ವಚನದಲ್ಲೂ ಸಮಾಜದ ಪರಿವರ್ತನೆಗೆ ಅಗತ್ಯವಿರುವ ಎಲ್ಲಾ ಅಂಶಗಳು ಅಡಗಿವೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶುಕ್ರವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಯೋಗಿವೇಮನ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆಪುಷ್ಪನಮನಸಲ್ಲಿಸುವಮೂಲಕ ಚಾಲನೆ ನೀಡಿ ಮಾತನಾಡಿದರು. ಸರ್ಕಾರ ಇಂತಹ ಮಹಾನುಭಾವರ ಸೇವೆಯನ್ನು ಸಾರ್ವಜನಿಕವಾಗಿ ಜಾಗೃತಿಗೊಳಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ



ತಹಶೀಲ್ದಾರ್ ರೇಹಾನ್ ಪಾಷ, ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ರೆಡ್ಡಿ ಸಮುದಾಯದ ಮುಖಂಡ ಸಹಕಾರದಿಂದ ಈ ಕಾರ್ಯಕ್ರಮ ಆಯೋಜಿಸಿದೆ. ಸರ್ಕಾರ ಯೋಗಿ ವೇಮನನವರ ಚಿಂತನೆಗಳು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಅನುಕೂಲವಾಗುವಂತೆ ಜಯಂತಿ ನಡೆಸಲಾಗುತ್ತಿದೆ ಎಂದರು. ಸಮಾಜದ ಮುಖಂಡ ಆರ್.ತಿಮ್ಮಾರೆಡ್ಡಿ ಯೋಗಿ ವೇಮನರವರ ಜೀವನ ಚರಿತ್ರೆಯ ಬಗ್ಗೆ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಅಧ್ಯಕ್ಷ ರಘುರೆಡ್ಡಿ, ಹಿರಿಯ ಮುಖಂಡ ಬಿ.ಆರ್.ತಿಮ್ಮಾರೆಡ್ಡಿ, ಪಿ.ಐ.ಬಸವರೆಡ್ಡಿ, ವೆಂಕಟೇಶ್‌ರೆಡ್ಡಿ, ರಾಜು, ದಿನೇಶ್‌ರೆಡ್ಡಿ, ಲಕ್ಷ್ಮಣ್‌ರೆಡ್ಡಿ, ಕೃಷ್ಣಾರೆಡ್ಡಿ, ಇಒ ಶಶಿಧರ, ಬಿಇಒ ಕೆ.ಎಸ್.ಸುರೇಶ್, ಪಶುವೈದ್ಯಾಧಿಕಾರಿ ರೇವಣ್ಣ, ಬಿಸಿಎಂ ಅಧಿಕಾರಿ ದಿವಾಕರ, ಕೃಷಿ ಅಧಿಕಾರಿ ಜೆ.ಅಶೋಕ್, ಪೌರಾಯುಕ್ತ ಸಿ.ಚಂದ್ರಪ್ಪ, ಸುಮಭರಮಣ್ಣ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T